ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 254 RNI Number : KNKAN/25/A2770 27-09-2026 Sunday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ:254 ರಾಯಚೂರು 27-09-2026 ರವಿವಾರ ಪುಟ 04 ಬೆಲೆ ರೂ.2/- ಮೊ:8660146563

29ರಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ನಿವಾಸ ಮುಂದೆ ಪ್ರತಿಭಟನೆ

ರಾಯಚೂರು, ಸೆ. 26–

ರೈತರ ಸಾಲ ಸಂಪೂರ್ಣ ಮನ್ನಾ ಹಾಗೂ ಡಾ.ಎಂ. ಎಸ್.ಸ್ವಾಮಿನಾಥನ್ ವರದಿ ಜಾರಿಗೊಳಿಸಬೇಕು,ಸಮಗ್ರ ನೀರಾವರಿ ,ವೈಜ್ಞಾನಿಕ ಬೆಂಬಲ ಬೆಲೆ ಅಡಿಯಲ್ಲಿ ಮಾರುಕ ಟ್ಟೆಯಲ್ಲಿ ಬೆಳೆ ಖರೀದಿಗೆ ವರ್ತಕರಿಗೆ ಕಟ್ಟುನಿಟ್ಟಿನ



ಕಾನೂನು ಜಾರಿಗೊಳುಸಬೇಕು,ರೈತರ ಪಂಪಸೆಟ್ ಗಳಿಗೆ ನಿರಂತರ ವಿದ್ಯುತ್ ಪೂರೈಕೆ ಸೇರಿದಂತೆ ಅನೇಕ ಬೇಡಿಕೆಗಳು ಈಡೇರಿ ಸಲು ಒತ್ತಾಯಿಸಿ ಸೆ.29ರಂದು ಹುಬ್ಬಳ್ಳಿಯ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಮನೆ ಮುಂದೆ ಬ್ರಹತ್ ಪ್ರತಿಭಟನೆ ನಡೆಸಲಾಗುವುದೆಂದು

ಡಾ.ಎಂ.ಎಸ್.ಸ್ವಾಮಿನಾಥನ್ ಆಯೋಗದ ವರದಿ ಜಾರಿ ಹೋರಾಟ ಸಮಿತಿ ಅಧ್ಯಕ್ಷ ಹಾಗೂ ಕರ್ನಾಟಕ ರಾಜ್ಯ ರೈತ ಸಂಘ ಹಾಗೂಹಸಿರು ಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ಶರಣಪ್ಪ ಮರಳಿ ಹೇಳಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡಿ, 2014ರಲ್ಲಿ ಲೋಕಸಭೆ ಚುನಾವಣೆ ಪೂರ್ವದಲ್ಲಿ ಗುಜರಾತ್ ಮತ್ತು ಮುಖ್ಯಮಂತ್ರಿ ಹಾಗೂ ಭಾವಿ ಪ್ರಧಾನ ಮಂತ್ರಿ ಆಕಾಂಕ್ಷಿಯಾದ ನರೇಂದ್ರ ಮೋದಿ ಅವರು ಸಮಾವೇಶಗಳನ್ನು ಮಾಡಿ ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದರೇ ರೈತರ ಸಾಲ ಸಂಪೂರ್ಣ ಮನ್ನಾ ಮಾಡುವುದಾಗಿ ಹಾಗೂ ಡಾ.ಎಂ.ಎಸ್. ಸ್ವಾಮಿನಾಥನ್ ಆಯೋಗದ ವರದಿ ಜಾರಿಗೊಳಿಸಿ ರೈತರ ಆದಾಯ ದ್ವಿಗುಣಗೊಳಿಸುವುದಾಗಿ ಹಾಗೂ ಅನೇಕ ರೈತರ ಸಮಸ್ಯೆಗಳನ್ನು ಬಗೆಹರಿಸುವುದಾಗಿ ಭರವಸೆ ನೀಡಿದ್ದರು. ಆದರೆ ಮೂರು ಸಲ ಪ್ರಧಾನ ಮಂತ್ರಿಯಾದರು ಯಾವುದೇ ಭರವಸೆ ಈಡೇರಿಸದೇ ಸುಳ್ಳು ಹೇಳಿ ಕಾರ್ಪೊರೇಟ್ ಕಂಪನಿಗಳ ಪರ ಕೆಲಸ ಮಾಡುತ್ತಿದ್ದಾರೆಂದು ಆರೋಪಿಸಿದರು.

ಈ ಪ್ರತಿಭಟನೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ರೈತರು ಭಾಗವಹಿಸಿ ಹೋರಾಟ ಯಶಸ್ವಿ ಗೊಳಿದಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮುಖಂಡರಾದ ನರಸಪ್ಪ ದೇವಸಗೂರು,ವೆಂಕಟೇಶ ಸಂತೆಕಲ್ಲೂರು,ಚನ್ನಪ್ಪ ಹುಣಸಿಹಾಳಹುಡಾ,ಚನ್ನಬಸಪ್ಪ,ನಿಂಗಪ್ಪ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ದೇವದುರ್ಗ ತಾಲೂಕು ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟಕ್ಕೆ ನೂತನ ಸಾರಥ್ಯ

ಅಧ್ಯಕ್ಷರಾಗಿ ಮಾರೆಪ್ಪ ಕೊತೊಡ್ಡಿ, ಪ್ರಧಾನ ಕಾರ್ಯದರ್ಶಿಯಾಗಿ ಮಲ್ಲಿಕಾರ್ಜುನ ದೇಸಾಯಿ

ಖಜಾಂಚಿಯಾಗಿ ಬಸವರಾಜ ಮಡಿವಾಳ ಅವಿರೋಧ ಆಯ್ಕೆ

ದೇವದುರ್ಗ: ದೇವದುರ್ಗ ತಾಲೂಕು ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟಕ್ಕೆ ನೂತನ ಪದಾಧಿಕಾರಿಗಳನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ. ಒಕ್ಕೂಟದ ಅಧ್ಯಕ್ಷರಾಗಿ ಮಾರೆಪ್ಪ ಕೊತ್ತದೊಡ್ಡಿ, ಪ್ರಧಾನ ಕಾರ್ಯದರ್ಶಿಯಾಗಿ ಮಲ್ಲಿಕಾರ್ಜುನ ದೇಸಾಯಿ ಹಾಗೂ ಖಜಾಂಚಿಯಾಗಿ ಬಸವರಾಜ ಮಡಿವಾಳ ಅವರು ಆಯ್ಕೆಯಾಗಿದ್ದಾರೆ.







ದೇವದುರ್ಗ ಪಟ್ಟಣದ ಬಸವ ಶಿಕ್ಷಣ ಸಂಸ್ಥೆಯಲ್ಲಿ ಶುಕ್ರವಾರ ನಡೆದ ತಾಲೂಕಿನ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಸದಸ್ಯರ ಸಭೆಯಲ್ಲಿ ನೂತನ ಪದಾಧಿಕಾರಿಗಳ ಆಯ್ಕೆಯನ್ನು ಘೋಷಿಸಲಾಯಿತು.

ಸಭೆಯಲ್ಲಿ ರಾಯಚೂರು ಜಿಲ್ಲಾ ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಕಾರ್ಯದರ್ಶಿ ಟಿ. ಬಸವರಾಜ್, ದೇವದುರ್ಗ ತಾಲೂಕು ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ನಿಕಟಪೂರ್ವ ಅಧ್ಯಕ್ಷ ಶಂಕರಲಿಂಗಯ್ಯ ಸ್ವಾಮಿ, ತಿರುಪತಿ ಸೂಗೂರ, ಚನ್ನಪ್ಪ ಬೂದಿನಾಳ, ಸುಭಾಷ್ ಪಾಟೀಲ, ಸುಭಾಷ್ ಬಿರಾದಾರ, ಸಿದ್ಧಯ್ಯ ಸ್ವಾಮಿ, ಹಂಪಣ್ಣ ಪಲ್ಲೇದ, ಮಿರಾಜ್ ಅಹ್ಮದ್, ಬಲಭೀಮಾ ಹೂಗಾರ್, ಮಲ್ಲಪ್ಪ ಕುಂಬಾರ್, ರಾಜಶೇಖರ್ ಸುಂಕೇಶ್ವರಹಾಳ, ಡಾ.ವಿಜಯ್ ರಡ್ಡಿ, ಗಂಗಣ್ಣ ಪೂಜಾರಿ, ಬಸವರಾಜ ಕೊಪ್ಪರ, ವೆಂಕಟೇಶ ಚಿಂತಲಕುಂಟ, ಪಾಮನಗೌಡ ಮಜ್ಜಗಿ, ಶಿವರಾಜ, ವೆಂಕೋಬ ನಾಯಕ ಸೇರಿದಂತೆ ತಾಲೂಕಿನ ಖಾಸಗಿ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

ಸಿಡಿಲು ಬಡಿದು ಆಡುಗಳ ಸಾವಿಗೆ ಶಾಸಕರಿಂದ ₹40 ಸಾವಿರ ನೆರವು

ಮಸ್ಕಿ,ಸೆ.26–

ಪಟ್ಟಣದ ಸಮೀಪ 2 ದಿನಗಳ ಹಿಂದೆ ಸುರಿದ ಮಳೆಯ ಸಂದರ್ಭದಲ್ಲಿ ಸಿಡಿಲು ಬಡಿದು ಸುಮಾರು 30 ಆಡುಗಳು ಮೃತಪಟ್ಟಿದ್ದವು. ಈ ಹಿನ್ನೆಲೆಯಲ್ಲಿ ಶಾಸಕ ಆರ್. ಬಸನಗೌಡ ತುರ್ವಿಹಾಳ ಅವರು ಶುಕ್ರವಾರ ಆಡು ಮಾಲೀಕರ ಮನೆಗೆ ಭೇಟಿ ನೀಡಿ ಸಾಂತ್ವನ ಹೇಳಿದರು.

ಆಡುಗಳ ಸಾವಿನಿಂದ ಉಂಟಾದ ನಷ್ಟದ ಕುರಿತು ಮಾಲೀಕರಿಂದ ಮಾಹಿತಿ ಪಡೆದ ಶಾಸಕರು, ವೈಯಕ್ತಿಕವಾಗಿ ₹40 ಸಾವಿರ ಸಹಾಯಧನ ನೀಡಿದರು. ಸಂಕಷ್ಟದಲ್ಲಿರುವ ಕುಟುಂಬ ದೊಂದಿಗೆ ಇರುವುದಾಗಿ ಭರವಸೆ ನೀಡಿದ ಅವರು, ಸಂಬಂಧಪಟ್ಟ ಇಲಾಖೆಯಿಂದ ದೊರೆಯುವ ಪರಿಹಾರವನ್ನು ಶೀಘ್ರವಾಗಿ ಒದಗಿಸಲು ಕ್ರಮಕೈಗೊಳ್ಳಬೇಕು ಎಂದು



ಅಧಿಕಾರಿಗಳಿಗೆ ಸೂಚಿಸಿ ದರು.


ತಹಶೀಲ್ದಾರ್ ಮಂಜುನಾಥ ಭೋಗಾವತಿ ಸೇರಿದಂತೆ ವಿವಿಧ ಇಲಾಖೆ ಗಳ ಅಧಿಕಾರಿಗಳು, ಮುಖಂಡರು ಹಾಗೂ ಗ್ರಾಮಸ್ಥರು ಹಾಜರಿದ್ದರು.

ದೇವದುರ್ಗದ ಹುಟ್ಟುವಳಿ ಮಾರಾಟ ಸಹಕಾರ ಸಂಘಕ್ಕೆ ₹4.84 ಲಕ್ಷ ನಿವ್ವಳ ಲಾಭ – ಶರಣಗೌಡ

12 ವಾಣಿಜ್ಯ ಮಳಿಗೆಗಳಿಂದ ನಿರಂತರ ಆದಾಯ; ಮತ್ತಷ್ಟು 10 ಮಳಿಗೆಗಳ ಕಾಮಗಾರಿ ಪ್ರಗತಿಯಲ್ಲಿ

ದೇವದುರ್ಗ,ಸೆ.26–

ದೇವದುರ್ಗ ತಾಲೂಕ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘವು 2025-26ನೇ ಸಾಲಿನಲ್ಲಿ ₹4,84,408.36 ನಿವ್ವಳ ಲಾಭ ಗಳಿಸಿದೆ ಎಂದು ಸಂಘದ ಅಧ್ಯಕ್ಷ ಶರಣಗೌಡ ಪಿ. ಮದರಕಲ್ ತಿಳಿಸಿದರು.



ಪಟ್ಟಣದ ಸಂಘದ ಕಚೇರಿಯಲ್ಲಿ ನಡೆದ 67ನೇ ವಾರ್ಷಿಕ ಮಹಾಸಭೆಯಲ್ಲಿ ಸಂಘದ ವಾರ್ಷಿಕ ವರದಿ ಮಂಡಿಸಿ ಮಾತನಾಡಿದ ಅವರು, 2026ರ ಮಾರ್ಚ್ 31ರ ವೇಳೆಗೆ ಸಂಘವು ಒಟ್ಟು 1,279 ಸದಸ್ಯರನ್ನು ಹೊಂದಿದ್ದು, ₹22,13, 057 ಪಾಲು ಬಂಡವಾಳ ಹೊಂದಿದೆ ಎಂದು ಹೇಳಿದರು.

ಪಾಲು ಬಂಡವಾಳದಲ್ಲಿ ಅ ವರ್ಗದ 12 ಸದಸ್ಯರಿಂದ ₹2,21, 695, ಬ ವರ್ಗದ 1,243 ಸದಸ್ಯರಿಂದ ₹10,62,005, ಕ ವರ್ಗದ 23 ಸದಸ್ಯರಿಂದ ₹5,007 ಹಾಗೂ ಡ ವರ್ಗದ ಒಬ್ಬ ಸದಸ್ಯರಿಂದ ₹9,24, 350 ಪಾಲು ಬಂಡವಾಳವಿದೆ ಎಂದು ವಿವರಿಸಿದರು.

2025-26ನೇ ಸಾಲಿನಲ್ಲಿ ಪಡಿತರ ಚಿಲ್ಲರೆ ವ್ಯವಹಾರದಲ್ಲಿ ₹77,54,320.98 ವಹಿವಾಟು ನಡೆಸಲಾಗಿದ್ದು, ಅಂತ್ಯೋದಯ ಕಾರ್ಡ್‌ದಾರರಿಗೆ ಆಹಾರ ಧಾನ್ಯ ವಿತರಣಾ ಕಾರ್ಯವನ್ನೂ ಸಮರ್ಪಕವಾಗಿ ನಿರ್ವಹಿಸಲಾಗಿದೆ ಎಂದರು.

ಸ್ವಂತ ಲಾಭದಲ್ಲಿ ಮಳಿಗೆ ನಿರ್ಮಾಣ

ಸಂಘದ ಸ್ವಂತ ಲಾಭದ ಹಣದಲ್ಲಿ ಸಂಘದ ಆವರಣದಲ್ಲಿ 12 ವಾಣಿಜ್ಯ ಮಳಿಗೆಗಳನ್ನು ನಿರ್ಮಿಸಿ ಬಾಡಿಗೆಗೆ ನೀಡಲಾಗಿದೆ. ಇದರಿಂದ ಸಂಘಕ್ಕೆ ನಿರಂತರ ಆದಾಯದ ಮೂಲ ಸೃಷ್ಟಿಯಾಗಿದೆ. ಇದೀಗ ಮತ್ತಷ್ಟು 10 ವಾಣಿಜ್ಯ ಮಳಿಗೆಗಳ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ ಎಂದು ಅಧ್ಯಕ್ಷರು ತಿಳಿಸಿದರು.

ಜಮಾ-ಖರ್ಚು ಪತ್ರಿಕೆಯ ಪ್ರಕಾರ ಆರ್‌ಡಿಸಿಸಿ ಬ್ಯಾಂಕ್ ಉಳಿತಾಯ ಖಾತೆ, ಎಸ್‌ಬಿಐ ಚಾಲ್ತಿ

3ನೇ ಪುಟ.....

ರಸ್ತೆಯೋ, ಕೆಸರುಗದ್ದೆಯೋ? ಐದನಾಳ ಎಸ್‌ಸಿ ವಾರ್ಡ್‌ನಲ್ಲಿ ಜನರ ಪರದಾಟ

ಲಿಂಗಸೂಗೂರು,

ತಾಲ್ಲೂಕಿನ ಐದನಾಳ ಗ್ರಾಮದ ಎಸ್‌ಸಿ ವಾರ್ಡ್‌ನಲ್ಲಿ ರಸ್ತೆ ಹಾಗೂ ಚರಂಡಿ ವ್ಯವಸ್ಥೆ ಸಂಪೂರ್ಣ ಹದಗೆಟ್ಟಿದ್ದು, ಮಳೆ ನೀರು ಸರಾಗವಾಗಿ ಹರಿದು ಹೋಗದೆ ಮನೆಗಳ ಮುಂಭಾಗವೇ ನಿಂತುಕೊಳ್ಳುತ್ತಿರುವುದರಿಂದ ನಿವಾಸಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಸಮಸ್ಯೆ ಪರಿಹರಿಸುವಂತೆ ಆಗ್ರಹಿಸಿ ವಾರ್ಡ್‌ನ ನಿವಾಸಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ವಾರ್ಡ್‌ನ ಬಹುತೇಕ ರಸ್ತೆಗಳು ಹಾಳಾಗಿದ್ದು, ಚರಂಡಿಗಳು ಸಮಪರ್ಕವಾಗಿ ನಿರ್ಮಾಣವಾಗದಿರುವುದು ಹಾಗೂ ಇದ್ದ ಚರಂಡಿಗಳಲ್ಲಿ ನೀರು ಹರಿದು ಹೋಗಲು ವ್ಯವಸ್ಥೆ ಇಲ್ಲದಿರುವುದರಿಂದ ಮಳೆ ಬಂದಾಗ ರಸ್ತೆಯೇ ಜಲಾವೃತವಾಗುವ



ಪರಿಸ್ಥಿತಿ ನಿರ್ಮಾಣವಾಗಿದೆ. ಹಲವು ಮನೆಗಳ ಮುಂಭಾಗದಲ್ಲಿ ದಿನಗಟ್ಟಲೆ ನೀರು ನಿಂತುಕೊಳ್ಳುತ್ತಿದ್ದು, ಕೆಲವೆಡೆ ಮನೆಗಳೊಳಗೆ ನೀರು ನುಗ್ಗುವ ಹಂತಕ್ಕೆ ತಲುಪಿದೆ ಎಂದು ನಿವಾಸಿಗಳು ಅಳಲು ತೋಡಿಕೊಂಡರು.

ನಿಂತ ನೀರಿನಿಂದ ರಸ್ತೆಗಳು ಕೆಸರುಮಯವಾಗುತ್ತಿದ್ದು, ಸಾರ್ವಜನಿಕರು ಓಡಾಡಲು ತೀವ್ರ ತೊಂದರೆ ಎದುರಿಸುತ್ತಿದ್ದಾರೆ. ವಿಶೇಷವಾಗಿ ವಯೋವೃದ್ದರು ಹಾಗೂ ಮಕ್ಕಳು ರಸ್ತೆಯಲ್ಲಿ ಸಂಚರಿಸುವಾಗ ಕಾಲು ಜಾರಿ ಬೀಳುವ ಘಟನೆಗಳು ಸಂಭವಿಸುತ್ತಿವೆ. ಶಾಲೆಗೆ ತೆರಳುವ ಮಕ್ಕಳು ಚರಂಡಿ ನೀರು ಹಾಗೂ ಕೆಸರು ತುಂಬಿದ ರಸ್ತೆಯಲ್ಲೇ ಸಂಚರಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಮಹಿಳೆಯರು ದೂರಿದರು.

ಸೊಳ್ಳೆಗಳ ಕಾಟ, ಆರೋಗ್ಯದ ಆತಂಕ

ಮನೆಗಳ ಮುಂಭಾಗ ಹಾಗೂ ರಸ್ತೆ ಬದಿಯಲ್ಲಿ ಕೊಳಚೆ ನೀರು ನಿಂತಿರುವುದರಿಂದ ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗಿದೆ. ಇದರಿಂದ ಮಕ್ಕಳು ಹಾಗೂ ವಯೋವೃದ್ಧರು ಸೇರಿದಂತೆ ಸ್ಥಳೀಯ ನಿವಾಸಿಗಳಲ್ಲಿ ವಿವಿಧ ಅನಾರೋಗ್ಯದ ಭೀತಿ ಎದುರಾಗಿದೆ. ಚರಂಡಿ ನೀರಿನಲ್ಲೇ ಮಕ್ಕಳು ನಡೆದುಕೊಂಡು ಶಾಲೆಗೆ ತೆರಳುತ್ತಿರುವುದರಿಂದ ಚರ್ಮ ಸಂಬಂಧಿತ ಸಮಸ್ಯೆಗಳು ಕಾಣಿಸಿಕೊಳ್ಳುತ್ತಿವೆ ಎಂದು ನಿವಾಸಿಗಳು ಆರೋಪಿಸಿದರು.

ಈ ಕುರಿತು ಸ್ಥಳೀಯ ನಿವಾಸಿ ರಾಧಾ ಮಾತನಾಡಿ, ಸುಮಾರು ತಿಂಗಳಿಂದ ಗ್ರಾಮ ಪಂಚಾಯಿತಿ ಅಧಿಕಾರಿಗಳಿಗೆ ಸಮಸ್ಯೆ ಬಗೆಹರಿಸುವಂತೆ ಮನವಿ ಸಲ್ಲಿಸುತ್ತಿದ್ದರೂ ಯಾವುದೇ ಪ್ರಯೋಜನವಾಗಿಲ್ಲ. ಮಳೆ ನೀರು ನಿಂತು ಮನೆಯೊಳಗೆ ನುಗ್ಗುವ ಹಂತಕ್ಕೆ ಬಂದಿದೆ. ಈ ಹಿಂದೆ ಪಂಚಾಯಿತಿ ಮುಂದೆ ಪ್ರತಿಭಟನೆ ನಡೆಸಿದರೂ ಅಧಿಕಾರಿಗಳು ಸಮಸ್ಯೆಗೆ ಸ್ಪಂದಿಸಿಲ್ಲ. ಮನೆಯಲ್ಲಿ ಮಕ್ಕಳು ಹಾಗೂ ವೃದ್ದರು ಇರುವುದರಿಂದ ಆರೋಗ್ಯದ ಬಗ್ಗೆ ಆತಂಕ ಎದುರಾಗಿದೆ. ಮಕ್ಕಳು ಶಾಲೆಗೆ ಹೋಗುವಾಗ

3ನೇ ಪುಟ.....

ಹಿಂದೂ ಮುಸ್ಲಿಂ ಭಾವೈಕ್ಯತೆಗೆ ಸಾಕ್ಷಿಯಾದ ಎಲ್.ಬಿ.ಎಸ್. ನಗರದ ಗಣೇಶ



ರಾಯಚೂರು,ಸೆ.25

ಇಂದು ರಾಯಚೂರಿನ ಎಲ್.ಬಿ.ಎಸ್.ನಗರದ ಬಡಾವಣೆಯ ಗಣೇಶನ ಪೂಜೆಗೆ ಇಟ್ಟರುವ ಲಡ್ಡನ್ನು 1 ಲಕ್ಷ ಹನ್ನೊಂದು ಸಾವಿರ ರೂಪಾಯಿಗಳಿಗೆ ಹರಾಜಿನಲ್ಲಿ ಸೈಯದ್ ಖೈಸರ್ ಎಂಬುವವರು ಪಡೆದಿದ್ದಾರೆ ಶ್ರೀ ವೀರ ಹನುಮಾನ ದೇವಸ್ಥಾನದಲ್ಲಿ ಓಂ ಗ್ರೂಪ್ ಅಸೋಸಿಯೇಷನ್ ವತಿಯಿಂದ ಪ್ರತಿಷ್ಠಾಪಿಸಲಾದ ಶ್ರೀ ಗಣೇಶ ಮೂರ್ತಿಯ ಲಡ್ಡನ್ನು ಹರಾಜಿನಲ್ಲಿ ಪಡೆದುಕೊಂಡು ಭಾವೈಕ್ಯತೆ ಮೆರೆದ ಬಡಾವಣೆಯ ನಿವಾಸಿಗಳು ಭಾವೈಕ್ಯತೆಗೆ ಕಾರಣರಾಗಿರುವ ಸೈಯದ್ ಖೈಸರ್ ರವರಿಗೆ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ .

ಈ ಸಂದರ್ಭದಲ್ಲಿ ಆರ್ ಡಿಎ ಮಾಜಿ ಅಧ್ಯಕ್ಷರಾದ ವೈ ಗೋಪಾಲ್ ರೆಡ್ಡಿ ಓಂಕಾರ ಯಾದವ್ ಶ್ರೀ ಜಂಬಣ್ಣ ವಕೀಲ್ ಹನುಮಂತರಾಯ ಪೂಜಾರಿ ಶ್ರೀನಿವಾಸ ಸಂತೋಷ ರಮೇಶ್ ಮೇಸ್ತ್ರಿ ನರಸಿಂಹ ವೆಂಕಟೇಶ್ ಸೇರಿದಂತೆ ಗಜಾನನ ಮಂಡಳಿ ಪದಾಧಿಕಾರಿಗಳು ನಿವಾಸಿಗಳು ಭಾಗಿಯಾಗಿದ್ದರು

ಸಿಇಸಿ ರಾಜೀನಾಮೆಗೆ ಒತ್ತಾಯ; ಸೆ. 30ಕ್ಕೆ ಇಂಡಿಯಾ ಒಕ್ಕೂಟದ ಮಿತ್ರ ಪಕ್ಷಗಳ ಸಭೆ

ನವದೆಹಲಿ: ಮತದಾರರ ತೀವ್ರ ಪರಿಷ್ಕರಣೆಯಲ್ಲಿ ಏಕಪಕ್ಷೀಯ ನಿರ್ಧಾರವನ್ನು ಕೈಗೊಳ್ಳಲಾಗಿದೆ ಎಂಬ ಆರೋಪದ ಮೇಲೆ ಕಾಂಗ್ರೆಸ್, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಒತ್ತಾಯಿಸಿದೆ. ಈ ವಿಚಾರಕ್ಕೆ ಸಂಬಂಧಿಸಿದಂತೆ ಇಂಡಿಯಾ ಒಕ್ಕೂಟದ ಮೈತ್ರಿ ಪಕ್ಷಗಳು ಸೆಪ್ಟೆಂಬರ್ 30ರಂದು ನವದೆಹಲಿಯಲ್ಲಿ ಸಭೆ ನಡೆಸುವ ಸಾಧ್ಯತೆ ಇದೆ.

ಚುನಾವಣಾ ಆಯೋಗದ ಎಸ್‌ಐಆರ್ ಪ್ರಕ್ರಿಯೆಯ ವಿಚಾರ ಕುರಿತು ಆಯೋಗದೊಳಗೆ ಭಿನ್ನಾಭಿಪ್ರಾಯ ಇದ್ದವು ಎಂಬ ವರದಿಗಳ ಬೆನ್ನಲ್ಲೇ ಸಿಇಸಿ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ವಿಪಕ್ಷಗಳು ಬೇಡಿಕೆ ಇಟ್ಟಿವೆ. ಈ ಬೇಡಿಕೆಗೆ ಸಂಬಂಧಿಸಿದಂತೆ ಮುಂದಿನ ಕ್ರಮಗಳನ್ನು ಕೈಗೊಳ್ಳುವ ಕುರಿತು ವಿರೋಧ ಪಕ್ಷಗಳು ಚರ್ಚಿಸುವ ನಿರೀಕ್ಷೆಯಿದೆ. ಈ ವಿಷಯದ ಕುರಿತು ಪಕ್ಷಗಳು ಪರಸ್ಪರ ಸಂಪರ್ಕದಲ್ಲಿದ್ದು, ಜಂಟಿ ಪ್ರತಿಕ್ರಿಯೆಯ ಬಗ್ಗೆ ಚರ್ಚಿಸುತ್ತಿವೆ ಎಂದು ಮೂಲಗಳು ಉಲ್ಲೇಖಿಸಿವೆ.

ಸಿಪಿಐ(ಎಂ), ಸಿಪಿಐ ಮತ್ತು ಸಿಪಿಐ(ಎಂಎಲ್) ಲಿಬರೇಶನ್ ಸೇರಿದಂತೆ ವಿವಿಧ ಪಕ್ಷಗಳು ಕುಮಾರ್ ಅವರನ್ನು ಹುದ್ದೆಯಿಂದ ತೆಗೆದುಹಾಕಬೇಕು. ಎಸ್‌ಐಆರ್ ಪ್ರಕ್ರಿಯೆಯನ್ನು ತಕ್ಷಣವೇ ನಿಲ್ಲಿಸಬೇಕು ಎಂದು ಆಗ್ರಹಿಸಿವೆ. ಕಾಂಗ್ರೆಸ್ ಕೂಡ ಮುಖ್ಯ ಚುನಾವಣಾ ಆಯುಕ್ತರ ವಿರುದ್ದದ ತನ್ನ ಟೀಕೆಗಳನ್ನು ತೀವ್ರಗೊಳಿಸಿದೆ. ಈ ವಿಷಯಕ್ಕೆ ಸಂಬಂಧಿಸಿದ ಮುಂದಿನ ಕಾರ್ಯತಂತ್ರದ ಕುರಿತು ಚರ್ಚಿಸಲು ಕಾಂಗ್ರೆಸ್ ಕಾರ್ಯಕಾರಿ ಸಮಿತಿಯು ಸೆಪ್ಟೆಂಬರ್ 29 ರಂದು ಸಭೆ ಸೇರಲಿದೆ.

ಜ್ಞಾನೇಶ್ ಕುಮಾರ್ ಕುರಿತು ಟೀಕಾ ಪ್ರಹಾರ ತೀವ್ರಗೊಳಿಸಿರುವ ಕಾಂಗ್ರೆಸ್ ಇಂದು ಅವರನ್ನು ದೇಶದ್ರೋಹಿ ಎಂದು ಕರೆದಿದ್ದು, ತಕ್ಷಣಕ್ಕೆ ರಾಜೀನಾಮೆ ನೀಡಬೇಕು ಎಂಬ ಫೋಟೋವನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದೆ.

ಸಿಇಸಿ ರಾಜೀನಾಮೆ ಬೆಳವಣಿಗೆಗಳು ಪಶ್ಚಿಮ ಬಂಗಾಳದ ಕಟು ರಾಜಕೀಯ ಪ್ರತಿಸ್ಪರ್ಧಿಗಳಾದ ಮಮತಾ ಬ್ಯಾನರ್ಜಿ ನೇತೃತ್ವದ ಟಿಎಂಸಿ ಮತ್ತು ಸಿಪಿಐ(ಎಂ) ಪಕ್ಷಗಳನ್ನು ಒಗ್ಗೂಡುವಂತೆ ಮಾಡಿದೆ. ಸಿಪಿಐ(ಎಂ) ಪ್ರಧಾನ ಕಾರ್ಯದರ್ಶಿ ಎಂ.ಎ. ಬೇಬಿ ಅವರು ಈ ಬೆಳವಣಿಗೆಗಳ ಕುರಿತು ಚರ್ಚಿಸಲು ಸಭೆಯೊಂದನ್ನು ನಡೆಸುವಂತೆ ಇಂಡಿಯಾ ಮೈತ್ರಿಕೂಟ ಮತ್ತು ಇತರ ವಿರೋಧ ಪಕ್ಷದ ನಾಯಕರಿಗೆ ಪತ್ರ ಬರೆದಿದ್ದು, ನಂತರ ಅವರು ಬ್ಯಾನರ್ಜಿ ಅವರೊಂದಿಗೆ ಮಾತನಾಡಿ, ಈ ಕುರಿತು ಸಮನ್ವಯದ ಕ್ರಮ ತೆಗೆದುಕೊಳ್ಳುವ ಅಗತ್ಯವಿದೆ ಎಂಬುದನ್ನು ತಿಳಿಸಿದ್ದು, ಇದಕ್ಕೆ ಬ್ಯಾನರ್ಜಿ ಕೂಡ ಒಪ್ಪಿಗೆ ಸೂಚಿಸಿದ್ದಾರೆ.

ವಿರೋಧ ಪಕ್ಷಗಳು ಮುಖ್ಯ ಚುನಾವಣಾ ಆಯುಕ್ತ ಕುಮಾರ್ ಅವರನ್ನು ಹುದ್ದೆಯಿಂದ ಕೆಳಗಿಳಿಸುವ ಕುರಿತು ಹೊಸದೊಂದು ಪ್ರಸ್ತಾವನೆಯನ್ನು ಸಿದ್ಧಪಡಿಸುತ್ತಿದ್ದು, ಕಾನೂನು ತಜ್ಞರ ಪರಿಶೀಲನೆಯ ನಂತರ ಇದನ್ನು ಸಂಸತ್ತಿನ ಉಭಯ ಸದನಗಳಲ್ಲಿ ಮಂಡಿಸುವ ಸಾಧ್ಯತೆ ಇದೆ. ಸಿಇಸಿ ವಿರುದ್ಧ ವಿಪಕ್ಷಗಳು ನಡೆಸುತ್ತಿರುವ ಮೂರನೇ ಪ್ರಯತ್ನ ಇದಾಗಿದೆ.

ಎಸ್‌ಐಆರ್ ಜಾರಿ ಪ್ರಕ್ರಿಯೆ ನಡುವೆ ಇಬ್ಬರು ಚುನಾವಣಾ ಆಯುಕ್ತರು 10 ತಿಂಗಳ ಅವಧಿಯಲ್ಲಿ 14 ಬಾರಿ ಚುನಾವಣಾ ಆಯೋಗದ ಕ್ರಮಗಳನ್ನು ವಿರೋಧಿಸಿದ್ದರು. ತಮಗೆ ತಿಳಿಯದೆಯೇ ಕೈಗೊಂಡ ನಿರ್ಧಾರಗಳು ಮತ್ತು ಹೊರಡಿಸಿದ ಆದೇಶಗಳ ಕುರಿತು ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಆಕ್ಷೇಪ ವ್ಯಕ್ತಪಡಿಸಿದ್ದಾರೆ ಎಂದು ಮಾಧ್ಯಮ ವರದಿ ಬೆನ್ನಲ್ಲೇ ವಿಪಕ್ಷಗಳು ಸಿಇಸಿ ರಾಜೀನಾಮೆಗೆ ಒತ್ತಾಯಿಸಿದ್ದಾರೆ.



ಕಲಬುರಗಿ ಕನ್ನೇರಿ ಮಠದ ಕಾಡಸಿದ್ದೇಶ್ವರ ಸ್ವಾಮೀಜಿ ಶಾಶ್ವತ ಗಡಿಪಾರಿಗೆ ಬಸವ ತತ್ವ ಹಾಗೂ ಸಂವಿಧಾನ ಸಂರಕ್ಷಣಾ ಸಮಿತಿ ಆಗ್ರಹ



ಕಲಬುರಗಿ,ಸೆ.26-

ಬಸವಾದಿ ಶರಣರ ತತ್ವ ಹಾಗೂ ವಚನ ಸಾಹಿತ್ಯವನ್ನು ತಿರುಚಿ ಹಿಂದುತ್ವದೊಂದಿಗೆ ಬೆಸೆಯುವ ಷಡ್ಯಂತ್ರ ನಡೆಯುತ್ತಿದೆ ಎಂದು ಆರೋಪಿಸಿ, ಕನ್ನೇರಿ ಮಠದ ಅದ್ಯಕ್ಷ ಕಾಡಸಿದ್ದೇಶ್ವರ ಸ್ವಾಮೀಜಿ ವಿರುದ್ಧ ಕ್ರಮ ಕೈಗೊಂಡು ಅವರನ್ನು ಕರ್ನಾಟಕದಿಂದ ಶಾಶ್ವತವಾಗಿ ಗಡಿಪಾರು ಮಾಡಬೇಕು ಎಂದು ಬಸವ ತತ್ವ ಹಾಗೂ ಸಂವಿಧಾನ ಸಂರಕ್ಷಣಾ ಸಮಿತಿ ಒತ್ತಾಯಿಸಿದೆ.

ನಗರದ ಜಗತ್ ವೃತ್ತದ ಸಮೀಪ ಶುಕ್ರವಾರ ಬಸವ ತತ್ವ ಹಾಗೂ ಸಂವಿಧಾನ ಸಂರಕ್ಷಣಾ ಸಮಿತಿ ವತಿಯಿಂದ ಆಯೋಜಿಸಿದ್ದ ಬಸವಾದಿ ಶಿವಶರಣರನ್ನು ಹಿಂದುತ್ವದೊಂದಿಗೆ ಸೇರಿಸುವುದನ್ನು ಖಂಡಿಸಿ ನಡೆದ ಪ್ರತಿಭಟನೆ ಹಾಗೂ ಬಹಿರಂಗ ಸಭೆಯಲ್ಲಿ 7 ನಿರ್ಣಯಗಳನ್ನು ಕೈಗೊಳ್ಳಲಾಯಿತು.

ಸಮಿತಿಯ ಪರವಾಗಿ ಸಾಮಾಜಿಕ ಹೋರಾಟಗಾರ್ತಿ ಕೆ.ನೀಲಾ ಅವರು ನಿರ್ಣಯಗಳನ್ನು ಮಂಡಿಸಿದರು. ಬಸವಾದಿ ಶಿವಶರಣರ ಹೆಸರುಗಳನ್ನು ಹಿಂದುತ್ವದೊಂದಿಗೆ ಜೋಡಿಸುವ ಕಾರ್ಯಕ್ರಮಗಳನ್ನು ಆಯೋಜಿಸುವವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು. ಶರಣರ ಇತಿಹಾಸವನ್ನು ತಿರುಚುವವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು. ವಚನಗಳ ಮೂಲ ಆಶಯವನ್ನು ತಪ್ಪಾಗಿ ವ್ಯಾಖ್ಯಾನಿಸುವ ಪ್ರಯತ್ನಗಳಿಗೆ ಕಡಿವಾಣ ಹಾಕಬೇಕು ಎಂದು ಆಗ್ರಹಿಸಿದರು.

12ನೇ ಶತಮಾನದಲ್ಲಿ ಬಸವಣ್ಣ ಹಾಗೂ ಶಿವಶರಣರು ವೈದಿಕ ಆಚರಣೆಗಳ ವಿರುದ್ಧ ಆಧ್ಯಾತ್ಮಿಕ ಹಾಗೂ ಸಾಮಾಜಿಕ ಕ್ರಾಂತಿ ನಡೆಸಿದ್ದರು. ಅವರ ತತ್ವಗಳನ್ನು ಉದ್ದೇಶಪೂರ್ವಕವಾಗಿ ವೈದಿಕತೆಯೊಂದಿಗೆ ಬೆಸೆಯುವ ಮೂಲಕ ಶರಣ ಸಿದ್ಧಾಂತವನ್ನು ತಿರುಚುವ ಪ್ರಯತ್ನ ನಡೆಯುತ್ತಿದೆ ಎಂದು ಸಭೆಯಲ್ಲಿ ಆರೋಪಿಸಲಾಯಿತು. ಇಂತಹ ಪ್ರಯತ್ನಗಳು ಧಾರ್ಮಿಕ ಸ್ವಾಯತ್ತತೆಗೆ ಧಕ್ಕೆ ಉಂಟುಮಾಡುತ್ತವೆ ಎಂದು ಮುಖಂಡರು ಹೇಳಿದರು.

ಸಮಾಜದಲ್ಲಿ ಸಂಘರ್ಷಕ್ಕೆ ಕಾರಣವಾಗುವ ಯಾವುದೇ ಬೆಳವಣಿಗೆಗಳಿಗೆ ಅವಕಾಶ ನೀಡದೆ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಬೇಕು ಎಂದು ಸರಕಾರವನ್ನು ಒತ್ತಾಯಿಸಲಾಯಿತು. ಇದಲ್ಲದೆ, ಲಿಂಗಾಯತ ಧರ್ಮಕ್ಕೆ ಸ್ವತಂತ್ರ ಧರ್ಮದ ಮಾನ್ಯತೆ ನೀಡಬೇಕು ಹಾಗೂ ಬಸವ ತತ್ವಗಳನ್ನು ಸಂರಕ್ಷಿಸಬೇಕು ಎಂದು ಆಗ್ರಹಿಸಲಾಯಿತು.

ಸಭೆಯಲ್ಲಿ ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತೂ ಆಕ್ಷೇಪ ವ್ಯಕ್ತವಾಯಿತು. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಪದಚ್ಯುತಗೊಳಿಸಬೇಕು ಹಾಗೂ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಸಮಿತಿ ನಿರ್ಣಯಿಸಿತು. ಚುನಾವಣಾ ಆಯೋಗದ ಸಿಬ್ಬಂದಿಯಲ್ಲಿ ರಾಜಕೀಯ ಸಿದ್ಧಾಂತದ ಪ್ರಭಾವವಿದೆ ಎಂಬ ಆರೋಪಗಳ ಕುರಿತು ತನಿಖೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಯಿತು.

ಬೀದರ್‌ನ ಚನ್ನಬಸವಾನಂದ ಸ್ವಾಮೀಜಿ ಮಾತನಾಡಿ, ಬಸವ ತತ್ವದ ಕುರಿತು ಭಿನ್ನ ನಿಲುವು ಹೊಂದಿರುವವರ ವಿರುದ್ಧ ಸೈದ್ಧಾಂತಿಕವಾಗಿ ಹೋರಾಟ ನಡೆಸಬೇಕು. ಇದು ವ್ಯಕ್ತಿ ವಿರೋಧದ ಹೋರಾಟವಲ್ಲ, ಸೈದ್ಧಾಂತಿಕ ಹೋರಾಟ ಎಂದು ಹೇಳಿದರು.

ಚಿಂತಕಿ ಮೀನಾಕ್ಷಿ ಬಾಳಿ ಮಾತನಾಡಿ, ಶರಣರ ಹೆಸರುಗಳನ್ನು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ. ಬಸವ ತತ್ವದ ಅನುಯಾಯಿಗಳಲ್ಲಿ ಕೆಲವರು ವೈದಿಕ ಸಂಸ್ಕೃತಿಯತ್ತ ಒಲವು ತೋರುತ್ತಿದ್ದಾರೆ. ಬಸವ ತತ್ವವನ್ನು ರಾಜಕೀಯ ಉದ್ದೇಶಗಳಿಗೆ ಬಳಸಿಕೊಳ್ಳಬಾರದು. ವಚನ ಸಾಹಿತ್ಯ ವೇದಗಳ ಮುಂದುವರಿದ ಭಾಗ ಎಂಬ ವಾದದ ಕುರಿತು ಮುಕ್ತ ಚರ್ಚೆಗೆ ಸಿದ್ಧವಿರುವುದಾಗಿ ಅವರು ಹೇಳಿದರು.

ರುದ್ರಪ್ಪ ಪಿ.ರಾಯಚೂರು ಮಾತನಾಡಿ, ಬಸವಣ್ಣನವರ ವಿಚಾರಧಾರೆಗೆ ಪರದೆ ಹಾಕುವ ಪ್ರಯತ್ನ ನಡೆಯುತ್ತಿದೆ. ಬಸವ ತತ್ವಕ್ಕೆ ಅಪಚಾರವಾಗುತ್ತಿದೆ ಎಂದು ಕಂಡುಬಂದಲ್ಲಿ ಜನರು ಪ್ರಜಾಸತ್ತಾತ್ಮಕವಾಗಿ ಧ್ವನಿ ಎತ್ತಬೇಕು, ಅದರ ವಿರುದ್ಧ ಬೀದಿಗಿಳಿದು ಹೋರಾಟ ನಡೆಸಬೇಕು ಎಂದು ಹೇಳಿದರು.

ಶಿವಶರಣಪ್ಪ ಹುಗ್ಗಿ ಪಾಟೀಲ್ ಮಾತನಾಡಿ, ಬಿಜೆಪಿ ನಾಯಕರಾದ ಮುರಳಿ ಮನೋಹರ ಜೋಶಿ, ಲಾಲ್ ಕೃಷ್ಣ ಅಡ್ವಾಣಿ ಹಾಗೂ ಸುಬ್ರಮಣಿಯನ್ ಸ್ವಾಮಿ ಸೇರಿದಂತೆ ಹಲವು ನಾಯಕರು ಮುಸ್ಲಿಂ ಸಮುದಾಯದವರೊಂದಿಗೆ ವಿವಿಧ ರೀತಿಯ ಸಾಮಾಜಿಕ ಹಾಗೂ ರಾಜಕೀಯ ಸಂಬಂಧಗಳನ್ನು ಹೊಂದಿದ್ದ ಉದಾಹರಣೆಗಳಿವೆ. ಆದರೆ, ಇದೇ ರಾಜಕೀಯ ವಲಯದಿಂದ ನಮ್ಮ ಮಧ್ಯೆ ಇದೀಗ ಲವ್ ಜಿಹಾದ್ ಕುರಿತು ಚರ್ಚೆ ಹುಟ್ಟುಹಾಕಲಾಗುತ್ತಿದೆ ಎಂದು ಆರೋಪಿಸಿದರು..

ಕಾರ್ಯಕ್ರಮದಲ್ಲಿ ಪ್ರಭುತಾಯಿ, ಮರಿಯಪ್ಪ ಹಳ್ಳಿ, ಅರ್ಜುನ್ ಭದ್ರೆ, ಆರ್.ಜಿ. ಶೆಟಕಾರ್, ರವೀಂದ್ರ ಶ್ಯಾಬಾದಿ, ಲಚ್ಚಪ್ಪ ಜಮಾದಾರ್, ಪಿಡ್ಡಪ್ಪ ಜಾಲಗಾರ, ಅಪ್ಪಾರಾವ ಅಕ್ಕೋಣೆ, ಗಣೇಶ್ ಚಿನ್ನಾಕರ್, ಶಿವಲಿಂಗಪ್ಪ ಗೌಳಿ, ಅಶೋಕ್ ಗೂಳಿ, ರವೀಂದ್ರ ಕೊಳಕೂರು ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಜೋಡೆತ್ತು ಉಳಿಸುವ ರೈತರಿಗೆ ಮಾಸಿಕ 11 ಸಾವಿರ ರೂ. ಪ್ರೋತ್ಸಾಹಧನ ನೀಡಲು ಆಗ್ರಹ

ಕಾಳಗಿ,ಸೆ.26-

ಸಾಂಪ್ರದಾಯಿಕ ಜೋಡೆತ್ತಿನ ಕೃಷಿ ಪದ್ಧತಿಯನ್ನು ಉಳಿಸಿ ಬೆಳೆಸುವ ಉದ್ದೇಶದಿಂದ ಜೋಡೆತ್ತು ಹೊಂದಿರುವ ರೈತರಿಗೆ ಸರ್ಕಾರ ಮಾಸಿಕವಾಗಿ 11 ಸಾವಿರ ರೂ. ಪ್ರೋತ್ಸಾಹಧನ ಘೋಷಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆ ಆಗ್ರಹಿಸಿತು.

ಪಟ್ಟಣದ ಶ್ರೀ ನೀಲಕಂಠ ಕಾಳೇಶ್ವರ ದೇವಸ್ಥಾನದ ಆವರಣದಲ್ಲಿ ಗುರುವಾರ ನಡೆದ ಕಾರ್ಯಕ್ರಮದಲ್ಲಿ ಸುಮಾರು 153 ಎತ್ತಿನ ಬಂಡಿಗಳೊಂದಿಗೆ ಆಗಮಿಸಿದ್ದ ರೈತರಿಗೆ ಪೂಜ್ಯರು ಸನ್ಮಾನಿಸಿ ಪ್ರಮಾಣಪತ್ರ ವಿತರಿಸಿದರು.

ಕಾಳಗಿ ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಆರು ತಾಂಡಗಳಿಂದ 150ಕ್ಕೂ ಹೆಚ್ಚು ಜೋಡೆತ್ತುಗಳೊಂದಿಗೆ ರೈತರು ಕಾರ್ಯಕ್ರಮದಲ್ಲಿ ಭಾಗವಹಿಸಿದರು. ಬಳಿಕ ಜೋಡೆತ್ತುಗಳಿಗೆ ವಿಶೇಷ ಪೂಜೆ ನೆರವೇರಿಸಿ ಬೃಹತ್ ಜಾಥಾಕ್ಕೆ ಚಾಲನೆ ನೀಡಲಾಯಿತು.

ಜಾಥಾವು ಶ್ರೀ ನೀಲಕಂಠ ಕಾಳೇಶ್ವರ ದೇವಸ್ಥಾನದಿಂದ ಆರಂಭವಾಗಿ ಮುಖ್ಯ ಬಜಾರ್ ರಸ್ತೆ, ಹಳೆ ಬಸ್ ನಿಲ್ದಾಣ ಮಾರ್ಗವಾಗಿ ಅಂಬೇಡ್ಕರ್ ವೃತ್ತದವರೆಗೆ ಸಂಚರಿಸಿತು.

ಈ ವೇಳೆ ಮಂಗಲಗಿ ಡಾ.ಶಾಂತಸೋಮನಾಥ ಶಿವಾಚಾರ್ಯರರು, ರಟಕಲ್ ರೇವಣಸಿದ್ಧ ಶರಣರು, ಕೋಡ್ಲಿ ಬಸವಲಿಂಗ ಶಿವಾಚಾರ್ಯರರು, ಹೊಸ್ಸಳ್ಳಿ ಪೂಜ್ಯ ಸಿದ್ಧಲಿಂಗ ಶಿವಾಚಾರ್ಯರರು, ಕಾಳಗಿ ನೀಲಕಂಠ ಮರಿದೇವರು, ರೈತ ಸಂಘ ರೈತ ಸೇನೆ ತಾಲೂಕಾಧ್ಯಕ್ಷ ವೀರಣ್ಣ ಗಂಗಾಣಿ, ರೈತರಾದ ಸಿದ್ರಾಮಪ್ಪ ಕಮಲಪೂರ, ಯುವ ಮುಖಂಡ ನೀಲಕಂಠ ಗುತ್ತೇದಾರ, ಶಿವರಾಜ್ ಪಾಟೀಲ್ ಗೋಣಗಿ, ಪುರಷೋತ್ತಮ್ ಗುತ್ತೇದಾರ, ಜಗದೀಶ್ ಪಾಟೀಲ, ಶೇಖರ್ ಮಾನಶೆಟ್ಟಿ, ಶಿವು ಸಾಲಿಮಠ, ಶರಣಪ್ಪ ಬೇಲೂರ, ಕಾಳಪ್ಪ ಕದ್ದರಗಿ, ಚಂದ್ರಕಾಂತ ಲಕ್ಷ್ಮಣನಾಯಕ ತಾಂಡಾ, ಆಕಾಶ್ ರಾಠೋಡ, ಮಲ್ಲಿಕಾರ್ಜುನ ತೇಲಿ, ಮಲ್ಲಿಕಾರ್ಜುನ ಹೂಗಾರ, ಸುಭಾಸ್ ಹುಳಗೇರಾ, ಶರಣು ಪೂಜಾರಿ ಸೇರಿದಂತೆ ನೂರಾರು ಸಂಖ್ಯೆಯಲ್ಲಿ ರೈತರು ಇದ್ದರು.

ಪೊಲೀಸರ ಎಚ್ಚರಿಕೆ ನಡುವೆಯೂ ಪ್ರಮೋದ್ ಮುತಾಲಿಕ್ ಪ್ರಚೋದನಕಾರಿ ಭಾಷಣ; ಆರೋಪ



ಬಾಗಲಕೋಟೆ,ಸೆ.26-

ಪ್ರಚೋದನಕಾರಿ ಭಾಷಣ ಮಾಡದಂತೆ ಪೊಲೀಸರು ಎಚ್ಚರಿಕೆ ನೀಡಿರುವ ಹೊರತಾಗಿಯೂ ಶ್ರೀರಾಮ ಸೇನೆ ಮುಖಂಡ ಪ್ರಮೋದ ಮುತಾಲಿಕ್ ಕೋಮು ಭಾವನೆ ಕೆರಳಿಸುವ ರೀತಿಯಲ್ಲಿ ಭಾಷಣ ಮಾಡಿದ್ದಾನೆ ಎಂಬ ಆರೋಪ ಕೇಳಿಬಂದಿದೆ.

ನಗರದಲ್ಲಿ ನಡೆದ ಗಣೇಶ ವಿಸರ್ಜನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಆಗಮಿಸಿದ್ದ ಪ್ರಮೋದ್ ಮುತಾಲಿಕ್ ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ನಿವಾಸಕ್ಕೆ ಭೇಟಿ ನೀಡಿದ್ದರು. ಈ ಸಂದರ್ಭದಲ್ಲಿ ಎಎಸ್ಪಿ ಜಗದೀಶ, ಡಿವೈಎಸ್ಪಿ ಗಜಾನನ ಸುತಾರ ಹಾಗೂ ಸಿಪಿಐ ವಿಜಯ ಬರಗುಂಡಿ ಅವರು ಭಾಂಡಗೆ ಅವರ ಮನೆಯಲ್ಲಿ ಮುತಾಲಿಕ್‌ನನ್ನು ಭೇಟಿಯಾಗಿ ಎಚ್ಚರಿಕೆ ನೀಡಿದ್ದಾರೆ ಎನ್ನಲಾಗಿದೆ.

ಶಾಂತಿಗೆ ಧಕ್ಕೆ ತರುವಂತಹ ಪ್ರಚೋದನಕಾರಿ ಭಾಷಣ ಮಾಡಬಾರದು ಹಾಗೂ ಕೋಮು ಭಾವನೆ ಕೆರಳಿಸುವ ಪದಗಳನ್ನು ಭಾಷಣದಲ್ಲಿ ಬಳಸಬಾರದು. ಒಂದು ವೇಳೆ ಪ್ರಚೋದನಕಾರಿ ಭಾಷಣ ಮಾಡಿದರೆ ಪ್ರಕರಣ ದಾಖಲಿಸಬೇಕಾಗುತ್ತದೆ ಎಂದು ಪೊಲೀಸರು ಎಚ್ಚರಿಕೆ ನೀಡಿದ್ದರು ಎನ್ನಲಾಗಿದೆ. ಇದಕ್ಕೆ ಪ್ರತಿಕ್ರಿಯಿಸಿದ ಮುತಾಲಿಕ್ ಅವರು ಕೋಮು ಭಾವನೆ ಕೆರಳಿಸುವ ರೀತಿಯಲ್ಲಿ ಭಾಷಣ ಮಾಡುವುದಿಲ್ಲ ಎಂದು ಪೊಲೀಸರಿಗೆ ಭರವಸೆ ನೀಡಿರುವುದಾಗಿ ವರದಿಯಾಗಿತ್ತು.

ಆದರೆ, ಬಳಿಕ ರಾತ್ರಿ ನಡೆದ ಕಾರ್ಯಕ್ರಮದ ವೇದಿಕೆಯಲ್ಲಿ ಮುತಾಲಿಕ್ ಪ್ರಚೋದನಕಾರಿ ಹೇಳಿಕೆಗಳನ್ನು ನೀಡಿದ್ದು, ಮಹಾತ್ಮ ಗಾಂಧೀಜಿ ಹಾಗೂ ಮುಸ್ಲಿಮರ ವಿರುದ್ಧ ದ್ವೇಷಪೂರಿತ ಹೇಳಿಕೆ ನೀಡಿರುವುದಾಗಿ ವರದಿಯಾಗಿದೆ. ಪೊಲೀಸರ ಎಚ್ಚರಿಕೆಯ ನಡುವೆಯೂ ಇಂತಹ ಹೇಳಿಕೆಗಳನ್ನು ನೀಡಿರುವ ಆರೋಪದ ಕುರಿತು ಪೊಲೀಸರು ಯಾವ ಕ್ರಮ ಕೈಗೊಳ್ಳುತ್ತಾರೆ ಎಂಬುದು ಇದೀಗ ಕುತೂಹಲಕ್ಕೆ ಕಾರಣವಾಗಿದೆ.

ಭಾಲ್ಕಿ ಕ್ಷೇತ್ರದಲ್ಲಿ ನೈಜ ಮತದಾರರ ಹೆಸರು ಅಳಿಸಲು ಪ್ರಯತ್ನ, ಈ ಕುರಿತು ಸಮಗ್ರ ತನಿಖೆಯಾಗಲಿ : ತಾಹೇರ್ ಹುಸೈನ್

ಬೀದರ್,ಸೆ.26-

ಭಾಲ್ಕಿ ವಿಧಾನಸಭಾ ಕ್ಷೇತ್ರದಲ್ಲಿ ನೈಜ ಮತದಾರರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ಅಳಿಸಲು ಫಾರಂ7 ಅರ್ಜಿಗಳನ್ನು ವ್ಯಾಪಕವಾಗಿ ಸಲ್ಲಿಸಿರುವ ಕುರಿತು ಗಂಭೀರ ಆರೋಪಗಳು ಕೇಳಿ ಬಂದಿದ್ದು, ಈ ಬಗ್ಗೆ ಚುನಾವಣಾ ಆಯೋಗ ಹಾಗೂ ಜಿಲ್ಲಾ ಆಡಳಿತವು ತಕ್ಷಣ ಸಮಗ್ರ ಮತ್ತು ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ರಾಜ್ಯಾಧ್ಯಕ್ಷ ತಾಹೇರ್ ಹುಸೈನ್ ಅವರು ಆಗ್ರಹಿಸಿದರು.

ನಗರದ ಖಾಸಗಿ ಹೋಟೆಲ್ ವೊಂದರಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ತಾಹೇರ್ ಹುಸೈನ್, ನಾವು ಪ್ರಾಥಮಿಕವಾಗಿ ಸಂಗ್ರಹಿಸಲಾದ ಮಾಹಿತಿಯ ಪ್ರಕಾರ,

ಭಾಲ್ಕಿಯಲ್ಲಿ ಒಟ್ಟು ಮೂರು ವಾರ್ಡ್‌ಗಳಲ್ಲಿ ಸುಮಾರು 1,198 ಮತದಾರರ ಹೆಸರುಗಳನ್ನು ಅಳಿಸುವಂತೆ ಫಾರಂ7 ಅರ್ಜಿಗಳನ್ನು ಸಲ್ಲಿಸಲಾಗಿದೆ. ಇದೇ ರೀತಿಯಾಗಿ ಹಲವು ವಾರ್ಡ್‌ಗಳಲ್ಲಿ ಹೆಚ್ಚಿನ ಸಂಖ್ಯೆಯ ಮತದಾರರ ಹೆಸರುಗಳನ್ನು ಅಳಿಸಲು ಅರ್ಜಿಗಳು ಸಲ್ಲಿಸಿರುವ ಮಾಹಿತಿ ಲಭ್ಯವಾಗಿದೆ ಎಂದು ತಿಳಿಸಿದರು.



ವಿಶೇಷವಾಗಿ ಈ ಅರ್ಜಿಗಳಲ್ಲಿ ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದ ನೈಜ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಒಳಗೊಂಡಿರುವುದು ಗಂಭೀರ ಪ್ರಶ್ನೆಗಳನ್ನು ಹುಟ್ಟು ಹಾಕಿದೆ. ಮತದಾರರ ಪಟ್ಟಿಯ ಪರಿಷ್ಕರಣೆಯ ಸಾಮಾನ್ಯ ಪ್ರಕ್ರಿಯೆಯ ಭಾಗವಾಗಿದ್ದರೆ, ಅರ್ಜಿಗಳ ಹಿಂದಿನ ಕಾರಣಗಳು, ಅರ್ಜಿದಾರರ ವಿವರಗಳು ಮತ್ತು ಸಂಬಂಧಿತ ದಾಖಲೆಗಳನ್ನು ಪಾರದರ್ಶಕವಾಗಿ ಪರಿಶೀಲಿಸುವ ಅಗತ್ಯವಿದೆ ಎಂದರು.

ಭಾಲ್ಕಿ ಕ್ಷೇತ್ರದಲ್ಲಿ ಸಲ್ಲಿಕೆಯಾಗಿರುವ ಫಾರಂ7 ಅರ್ಜಿಗಳ ಕುರಿತು ಚುನಾವಣಾ ಆಯೋಗ ಮತ್ತು ಜಿಲ್ಲಾ ಆಡಳಿತವು ವಿಶೇಷ ತನಿಖೆ ನಡೆಸಬೇಕು. ಯಾವುದೇ ಅರ್ಹ ಮತ್ತು ನೈಜ ಮತದಾರನ ಹೆಸರನ್ನು ಅನ್ಯಾಯವಾಗಿ ಮತದಾರರ ಪಟ್ಟಿಯಿಂದ ತೆಗೆದುಹಾಕಬಾರದು. ವಿಶೇಷವಾಗಿ ಯಾವುದೇ ಒಂದು ಸಮುದಾಯದ ಮತದಾರರನ್ನು ಗುರಿಯಾಗಿಸಿಕೊಂಡು ಮತದಾರರ ಪಟ್ಟಿಯಲ್ಲಿ ಬದಲಾವಣೆ ಮಾಡುವ ಪ್ರಯತ್ನ ನಡೆದಿದೆಯೇ ಎಂಬುದನ್ನು ಅಧಿಕಾರಿಗಳು ಪರಿಶೀಲಿಸಬೇಕು. ತಪ್ಪು ಅಥವಾ ದುರುದ್ದೇಶಪೂರ್ವಕವಾಗಿ ಸಲ್ಲಿಸಲಾದ ಅರ್ಜಿಗಳು ಕಂಡುಬಂದರೆ, ಅದರ ಹಿಂದೆ ಇರುವವರ ವಿರುದ್ಧ ಕಾನೂನುಬದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮತದಾನದ ಹಕ್ಕು ಪ್ರಜಾಪ್ರಭುತ್ವದ ಮೂಲಭೂತ ಹಕ್ಕು. ಪ್ರತಿಯೊಬ್ಬ ಅರ್ಹ ಮತದಾರನ ಹೆಸರನ್ನು ಮತದಾರರ ಪಟ್ಟಿಯಲ್ಲಿ ಸುರಕ್ಷಿತವಾಗಿ ಉಳಿಸುವುದು ಚುನಾವಣಾ ಆಯೋಗದ ಜವಾಬ್ದಾರಿಯಾಗಿದೆ. ಪ್ರಜಾಪ್ರಭುತ್ವ ಮತ್ತು ನಾಗರಿಕರ ಬೆನ್ನಿಗೆ ಚೂರಿ ಹಾಕಿರುವ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ತಕ್ಷಣವೇ ವಜಾಗೊಳಿಸಬೇಕು ಎಂದು ಅವರು ಆಗ್ರಹಿಸಿದರು.

ಮತದಾರರ ಪಟ್ಟಿ ಕೇವಲ ಆಡಳಿತಾತ್ಮಕ ದಾಖಲೆ ಅಲ್ಲ. ಅದು ಪ್ರತಿಯೊಬ್ಬ ನಾಗರಿಕನ ಪ್ರಜಾಸತ್ತಾತ್ಮಕ ಹಕ್ಕಿನ ಆಧಾರವಾಗಿದೆ. ಮತದಾರರ ಹಕ್ಕು ರಕ್ಷಿಸಬೇಕು. ಮತದಾರರ ಪಟ್ಟಿ ಪಾರದರ್ಶಕವಾಗಬೇಕು. ಚುನಾವಣಾ ಪ್ರಕ್ರಿಯೆಯ ಮೇಲಿನ ಜನರ ವಿಶ್ವಾಸ ಉಳಿಯಬೇಕು ಎಂದು ಅವರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ಜಿಲ್ಲಾಧ್ಯಕ್ಷ ಮುಬಶೀರ್ ಶಿಂದೆ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಇಬ್ರಾಹಿಂ ಹಾಗೂ ತಾಲೂಕಾಧ್ಯಕ್ಷ ಜಾವೀದ್ ಸೇರಿದಂತೆ ಪಕ್ಷದ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಪುಸ್ತಕಗಳು ಬದುಕಿಗೆ ದಾರಿದೀಪ: ಡಾ.ಸ್ವಾಮಿರಾವ್ ಕುಲಕರ್ಣಿ

ಕಲಬುರಗಿ,ಸೆ.26-

ಪುಸ್ತಕಗಳು ವ್ಯಕ್ತಿಗೆ ಸಂಸ್ಕಾರ ಮತ್ತು ಸಂಸ್ಕೃತಿಯ ಅರಿವು ಮೂಡಿಸುವುದರ ಜೊತೆಗೆ ಜೀವನದಲ್ಲಿ ಸಾಧನೆಯತ್ತ ಸಾಗಲು ಮಾರ್ಗದರ್ಶನ ನೀಡುತ್ತವೆ. ಜೀವಂತ ಆದರ್ಶಗಳ ಪಾಠ ಕಲಿಸುವ ಪುಸ್ತಕಗಳು ಬದುಕಿಗೆ ದಾರಿದೀಪವಾಗುತ್ತವೆ ಎಂದು ಹಿರಿಯ ಸಾಹಿತಿ ಡಾ. ಸ್ವಾಮಿರಾವ್ ಕುಲಕರ್ಣಿ ಹೇಳಿದರು.

ನಗರದ ರಾಮಮಂದಿರ ಸಮೀಪದ ವಿವೇಕಾನಂದ ವಿದ್ಯಾನಿಕೇತನ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಶ್ರೀಮತಿ ಬಾಲಮ್ಮ ಮಹಾದೇವಪ್ಪ ಕಡೇಚೂರ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಹೈದರಾಬಾದ್ ಕರ್ನಾಟಕ ವಿಮೋಚನಾ ಹೋರಾಟಗಾರ ಹಾಗೂ ಸಾಹಿತಿ ದಿ. ಮಹಾದೇವಪ್ಪ ಕಡೇ ಚೂರ್ ಅವರ ಅಯ್ಯನ ಕಥೆಗಳು ಪುಸ್ತಕ ವಿತರಣಾ ಅಭಿಯಾನದ ಮೂರನೇ ಕಾರ್ಯಕ್ರಮದಲ್ಲಿ ಅವರು ಮುಖ್ಯ ಅತಿಥಿಯಾಗಿ ಮಾತನಾಡಿದರು.

ಮಹಾದೇವಪ್ಪ ಕಡೇಚೂರ್ ಅವರು ಹೈದರಾಬಾದ್ ಕರ್ನಾಟಕ ವಿಮೋಚನಾ ಹೋರಾಟದಲ್ಲಿ ಭಾಗವಹಿಸುವುದರ ಜೊತೆಗೆ ಸಾಹಿತ್ಯ ಕ್ಷೇತ್ರಕ್ಕೂ ಮಹತ್ವದ ಕೊಡುಗೆ ನೀಡಿದ್ದಾರೆ. ಅವರ ಚಿಂತನೆಗಳು ಮತ್ತು ಬದುಕಿನ ಆದರ್ಶಗಳನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುವ ಟ್ರಸ್ಟ್‌ನ ಈ ಅಭಿಯಾನ ಶ್ಲಾಘನೀಯವಾಗಿದೆ ಎಂದು ಹೇಳಿದರು.



ಹಿರಿಯ ಪತ್ರಕರ್ತ ಬಾಬು ರಾವ್ ಯಡ್ರಾಮಿ ಮಾತನಾಡಿ, ಪುಸ್ತಕ ವಿತರಣಾ ಅಭಿಯಾನವನ್ನು ಕಲ್ಯಾಣ ಕರ್ನಾಟಕದಾದ್ಯಂತ ವಿಸ್ತರಿಸಿ ವಿದ್ಯಾರ್ಥಿಗಳಲ್ಲಿ ಓದುವ ಹವ್ಯಾಸ ಬೆಳೆಸಬೇಕು ಎಂದು ಕರೆ ನೀಡಿದರು.

ಮಹಾದೇವಪ್ಪ ಕಡೇಚೂರ್ ಅವರ ಬದುಕು, ಬರಹ ಮತ್ತು ಆದರ್ಶಗಳು ಯುವಜನರಿಗೆ ಸ್ಫೂರ್ತಿದಾಯಕವಾಗಿವೆ. ಸ್ವಾತಂತ್ರ್ಯ ಹೋರಾಟಗಾರರು, ತಂದೆ-ತಾಯಿ ಮತ್ತು ಗುರುಗಳನ್ನು ಆದರ್ಶವಾಗಿಟ್ಟುಕೊಂಡು ಮುನ್ನಡೆದರೆ ಉತ್ತಮ ಸಾಧನೆ ಸಾಧ್ಯ. ವಿದ್ಯಾರ್ಥಿಗಳು ಮೊಬೈಲ್ ಬಳಕೆಗೆ ಮಿತಿ ಹಾಕಿಕೊಂಡು ಅಧ್ಯಯನ ಶೀಲರಾಗಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿವೇಕಾನಂದ ವಿದ್ಯಾನಿಕೇತನ ಸಂಸ್ಥೆಯ ಪ್ರಾಂಶುಪಾಲ ಸಿದ್ದಪ್ಪ ಭಗವತಿ ವಹಿಸಿದ್ದರು.

ವಿದ್ಯಾರ್ಥಿನಿ ಅನನ್ಯ ಪ್ರಾರ್ಥನಾ ಗೀತೆ ಹಾಡಿದರು. ವಿದ್ಯಾರ್ಥಿನಿಯರಾದ ಸಾನ್ವಿ ಕುಲಕರ್ಣಿ, ಕಾವ್ಯ ಬಸಮೆ ಹಾಗೂ ಅನುಷಾ ಆನಂದ್ ಕಾರ್ಯಕ್ರಮ ನಿರೂಪಿಸಿದರು. ಶಿಕ್ಷಕಿ ರತ್ನಾ ಅಳ್ಳದ್ ವಂದಿಸಿದರು. ಬಳಿಕ ವಿದ್ಯಾರ್ಥಿಗಳಿಗೆ ಅಯ್ಯನ ಕಥೆಗಳು ಪುಸ್ತಕ ಹಾಗೂ ಸಿಹಿ ವಿತರಿಸಲಾಯಿತು.

ಸೆ.28 ರಂದು ಉದ್ಯೋಗ ಮೇಳ

ಬೀದರ್,ಸೆ.26-

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಿಂದ ಸೆ.28ರ ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆವರೆಗೆ ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿ ಪ್ರಭಾಕರ್ ಅವರು ಪ್ರಕಟಣೆ ಮೂಲಕ ತಿಳಿಸಿದ್ದಾರೆ. ಉದ್ಯೋಗ ಮೇಳದಲ್ಲಿ ಖಾಸಗಿ ಕಂಪೆನಿಗಳು ಭಾಗವಹಿಸುತ್ತಿದ್ದು, ಈ ಮೇಳದಲ್ಲಿ ಯುವನಿಧಿ ಫಲಾನುಭವಿಗಳಿಗೆ ವಿಶೇಷ ಆದ್ಯತೆ ನೀಡಲಾಗುವುದು. ಯುವನಿಧಿ ಅಭ್ಯರ್ಥಿಗಳು ತಪ್ಪದೇ ಈ ಮೇಳದಲ್ಲಿ ಪಾಲ್ಗೊಳ್ಳಲು ಸೂಚಿಸಲಾಗಿದ್ದು, ಭಾಗವಹಿಸುವ ಅಭ್ಯರ್ಥಿಗಳಿಗೆ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ ಎಂದು ಮಾಹಿತಿ ನೀಡಲಾಗಿದೆ. ಉದ್ಯೋಗ ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ಮೊಬೈಲ್ ಸಂಖ್ಯೆ 99015 63260, 91001 24787 ಹಾಗೂ 78926 20675ಗೆ ಕರೆ ಮಾಡಿ ಪೂರ್ವ ನೋಂದಣಿ ಮಾಡಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ನಗರದ ಮನ್ನಳ್ಳಿ ರಸ್ತೆಯಲ್ಲಿರುವ ಕುಂಬಾರವಾಡಾ ಕ್ರಾಸ್ ಹತ್ತಿರವಿರುವ 'ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಸರ್ಕಾರಿ ಐಟಿಐ ಕಾಲೇಜು) ಇಲ್ಲಿಗೆ ಸಂಪರ್ಕಿಸಬಹುದು ಎಂದು ಅವರು ತಿಳಿಸಿದ್ದಾರೆ.

ಜಿಟಿಟಿಸಿ ಧಾರವಾಡದಲ್ಲಿ ಜರುಗಿದ ಇಂಟರ್ನ್‌ಶಿಪ್ ತರಬೇತಿ ಕಾರ್ಯಕ್ರಮ

ಧಾರವಾಡ ,ಸೆ.26-

ಜಿಟಿಟಿಸಿ ಧಾರವಾಡ ವತಿಯಿಂದ ಜೆಎಸ್‌ಎಸ್ ಕೌಶಲ್ಯ ಐಟಿಐ ಕಾಲೇಜಿನ ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿದ್ದ ಇಂಟರ್ನ್‌ಶಿಪ್ ತರಬೇತಿ ಕಾರ್ಯಕ್ರಮವು ಯಶಸ್ವಿಯಾಗಿ ಪೂರ್ಣಗೊಂಡಿತು. ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಅನುಭವ ಹಾಗೂ ಕೈಗಾರಿಕಾ ಆಧಾರಿತ ತಾಂತ್ರಿಕ ಕೌಶಲ್ಯಗಳನ್ನು ಒದಗಿಸುವ ಉದ್ದೇಶದಿಂದ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಕೌಶಲ್ಯ ಅಭಿವೃದ್ಧಿ ಘಟಕದ ಮುಖ್ಯಸ್ಥ ಬಸವರಾಜ ಬಿ ಅವರು ಮಾತನಾಡಿ, ವಿದ್ಯಾರ್ಥಿಗಳು ಇಂತಹ ಪ್ರಾಯೋಗಿಕ ಹಾಗೂ ಕೈಗಾರಿಕಾ ಆಧಾರಿತ ತರಬೇತಿ ಕಾರ್ಯಕ್ರಮಗಳನ್ನು ಸದುಪಯೋಗ ಪಡಿಸಿಕೊಂಡು ತಮ್ಮ ತಾಂತ್ರಿಕ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಿಕೊಳ್ಳಬೇಕು ಹಾಗೂ ಭವಿಷ್ಯದ ಉದ್ಯೋಗಾವಕಾಶಗಳಿಗೆ ತಮ್ಮನ್ನು ತಾವು ಸಿದ್ಧಪಡಿಸಿಕೊಳ್ಳಬೇಕು ಎಂದು ಹೇಳೀದರು.

ಜಿಟಿಟಿಸಿ ಪ್ರಾಂಶುಪಾಲ ಶಿವಾನಂದ ಬಿ. ಕುಂಬಾರ, ಅಧ್ಯಕ್ಷೀಯ ಭಾಷಣ ಮಾಡುತ್ತಾ, ತರಬೇತಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ವಿದ್ಯಾರ್ಥಿಗಳು, ಬೋಧಕ ಸಿಬ್ಬಂದಿ ಹಾಗೂ ಸಂಯೋಜಕರನ್ನು ಅಭಿನಂದಿಸಿದರು.



ಯುವಜನರಿಗೆ ಕೌಶಲ್ಯ ಆಧಾರಿತ, ಪ್ರಾಯೋಗಿಕ ಹಾಗೂ ಕೈಗಾರಿಕಾ ಆಧಾರಿತ ತರಬೇತಿಯನ್ನು ಒದಗಿಸುವ ಮೂಲಕ ಅವರನ್ನು ಸಬಲಗೊಳಿಸುವುದು ಮತ್ತು ಉತ್ತಮ ಉದ್ಯೋಗಾವಕಾಶಗಳಿಗೆ ಸಿದ್ಧಪಡಿಸುವುದು ಜಿಟಿಟಿಸಿ ಧಾರವಾಡದ ನಿರಂತರ ಬದ್ಧತೆಯಾಗಿದೆ ಎಂದರು.

ತರಬೇತಿಯಲ್ಲಿ PCB Design, CNC Milling ತಾಂತ್ರಿಕ ವಿಷಯಗಳಿಗೆ ಪ್ರಾಯೋಗಿಕ ತರಬೇತಿ ನೀಡಲಾಯಿತು. ತರಬೇತಿಯ ಮೂಲಕ ವಿದ್ಯಾರ್ಥಿಗಳಿಗೆ ಯಂತ್ರೋಪಕರಣಗಳು ಹಾಗೂ ತಾಂತ್ರಿಕ ಪ್ರಕ್ರಿಯೆಗಳ ಕುರಿತು ಪ್ರಾಯೋಗಿಕ ಜ್ಞಾನ ಮತ್ತು ಕೈಚಳಕದ ಅನುಭವ ದೊರೆಯಿತು. ನಂತರ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು.

ಜೆಟಿಓಗಳಾದ ಲಿಂಗರಾಜ್ ಹಾಗೂ ಶ್ರೀನಾಥ್ ಮಡಿವಾಳರ್ ಅವರು ಈ ಉಪಕ್ರಮವನ್ನು ಶ್ಲಾಘಿಸಿ, ತಮ್ಮ ವಿದ್ಯಾರ್ಥಿಗಳಿಗೆ ಉತ್ತಮ ತಾಂತ್ರಿಕ ತರಬೇತಿ ಅವಕಾಶವನ್ನು ಕಲ್ಪಿಸಿದ ಜಿಟಿಟಿಸಿ ಧಾರವಾಡಕ್ಕೆ ಧನ್ಯವಾದಗಳನ್ನು ಸಲ್ಲಿಸಿದರು.

ಕಾರ್ಯಕ್ರಮವನ್ನು ಸಂಯೋಜಕ ಮಹೇಶ್ ಜಕ್ಕಳಿ, ಎಲೆಕ್ಟ್ರಿಕಲ್ ಫ್ಯಾಕಲ್ಟಿ ಪೂಜ್ಟಾ ಅವರು ಸಂಯೋಜಿಸಿದರು.

ಕೈ , ರುಂಡ ಕತ್ತರಿಸಿದ ಸ್ಥಿತಿಯಲ್ಲಿ ಯುವಕನ ಮೃತದೇಹ ಪತ್ತೆ: ಕೊಲೆ ಶಂಕೆ

ಅಫಜಲಪುರ,ಸೆ.26-

ತಾಲೂಕಿನ ಗೊಬ್ಬುರ(ಬಿ) ಗ್ರಾಮದ ಹೊರವಲಯದ ಜಮೀನೊಂದರಲ್ಲಿ ಯುವಕನೋರ್ವನ ಮೃತದೇಹ ಪತ್ತೆಯಾಗಿದೆ . ಮೃತನನ್ನು ಖಲೀಂ ಸಾಬ್(22) ಎಂದು ಗುರುತಿಸಲಾಗಿದೆ. ಯುವಕನ ಮೃತದೇಹವು ಕೈ ಹಾಗೂ ರುಂಡ ಕತ್ತರಿಸಿರುವ ಸ್ಥಿತಿಯಲ್ಲಿ ಪತ್ತೆಯಾಗಿ ರುವುದಾಗಿ ತಿಳಿದು ಬಂದಿದೆ. ಘಟನೆ ಬೆಳಕಿಗೆ ಬರುತ್ತಿದ್ದಂತೆ ಸ್ಥಳೀಯರಲ್ಲಿ ಆತಂಕ ಮೂಡಿದ್ದು, ಮಾಹಿತಿ ತಿಳಿದ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಘಟನೆ ದೇವಲ ಗಾಣಗಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದು, ಪೊಲೀಸರು ಈ ಕುರಿತು ತನಿಖೆಯನ್ನು ಆರಂಭಿಸಿದ್ದಾರೆ.

ಒಂದನೇಯ ಪುಟದಿಂದ

ದೇವದುರ್ಗದ ಹುಟ್ಟುವಳಿ ಮಾರಾಟ ಸಹಕಾರ ಸಂಘಕ್ಕೆ ₹4.84 ಲಕ್ಷ ನಿವ್ವಳ ಲಾಭ - ಶರಣಗೌಡ

12 ವಾಣಿಜ್ಯ ಮಳಿಗೆಗಳಿಂದ ನಿರಂತರ ಆದಾಯ; ಮತ್ತಷ್ಟು 10 ಮಳಿಗೆಗಳ ಕಾಮಗಾರಿ ಪ್ರಗತಿಯಲ್ಲಿ

ಖಾತೆ ಹಾಗೂ ಕೆಎಸ್‌ಸಿಸಿ ಲಿಮಿಟೆಡ್ ರಾಯಚೂರು ಕೊಡತಕ್ಕ ಜಿಲ್ಲೆಗಳ ಖಾತೆ ಸೇರಿದಂತೆ ಸಂಘದ ಎಲ್ಲ ಹಣಕಾಸು ವ್ಯವಹಾರಗಳನ್ನು ನಿಯಮಾನುಸಾರ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಲೆಕ್ಕಪರಿಶೋಧನಾ ವರದಿಗೆ ಸಂಬಂಧಿಸಿದಂತೆ ಸಂಘದಿಂದ ಸಂಪೂರ್ಣ ಪಾಲನೆ ವರದಿ ಸಲ್ಲಿಸಲಾಗಿದೆ. ಎಲ್ಲ ಸದಸ್ಯರಿಗೂ ಷೇರು ಪ್ರಮಾಣಪತ್ರ ನೀಡುವುದು, ಮೀಸಲು ನಿಧಿ ನಿಯಮ ಪಾಲನೆ ಹಾಗೂ ಸಹಕಾರ ಶಿಕ್ಷಣ ನಿಧಿ ಪಾವತಿ ಸೇರಿದಂತೆ ಅಗತ್ಯ ಅನುಪಾಲನಾ ಕ್ರಮಗಳನ್ನು ಕ್ರಮಬದ್ಧವಾಗಿ ಕೈಗೊಳ್ಳಲಾಗುವುದು ಎಂದು ಆಡಳಿತ ಮಂಡಳಿ ತಿಳಿಸಿದೆ.

ಸಂಘದ ಅಭಿವೃದ್ಧಿಗೆ ಸಹಕರಿಸಿದ ಗುಲಬರ್ಗಾ ಪ್ರಾಂತದ ಜಂಟಿ ನಿಬಂಧಕರು, ಉಪನಿಬಂಧಕರು, ಸಹಾಯಕ ನಿಬಂಧಕರು ಹಾಗೂ ರಾಯಚೂರು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ನ ಅಧಿಕಾರಿಗಳಿಗೆ ಅಧ್ಯಕ್ಷ ಶರಣಗೌಡ ಪಿ. ಮದರಕಲ್ ಹಾಗೂ ವ್ಯವಸ್ಥಾಪಕ ಶರಣಬಸವ ವಿ. ಬಳೆ ಕೃತಜ್ಞತೆ ಸಲ್ಲಿಸಿದರು.

ರಾಜ್ಯ ಸರ್ಕಾರ ನೀಡುವ ಪಾಲು ಹಣಕ್ಕೆ ಸರಿಸಮನಾಗಿ ಸಂಘದ ಸದಸ್ಯರಿಂದಲೂ ಪಾಲು ಬಂಡವಾಳ ಸಂಗ್ರಹಿಸಬೇಕಿರುವುದರಿಂದ ಸದಸ್ಯರೆಲ್ಲರೂ ಹೆಚ್ಚಿನ ಪಾಲು ಹಣ ನೀಡಿ ಸಂಘದ ಅಭಿವೃದ್ಧಿಗೆ ಸಹಕರಿಸಬೇಕು ಎಂದು ಅಧ್ಯಕ್ಷ ಶರಣಗೌಡ ಪಿ. ಮದರಕಲ್ ಮನವಿ ಮಾಡಿದರು.

ಈ ಸಭೆಯಲ್ಲಿ ಆರ್. ಡಿ. ಸಿ. ಸಿ. ಬ್ಯಾಂಕಿನ ನಿರ್ದೇಶಕ ಎ. ರಾಜಶೇಖರ ನಾಯಕ, ನಿರ್ದೇಶಕರಾದ ಶರಣಗೌಡ ಕಮತಗಿ, ಪ್ರಕಾಶ ಪಾಟೀಲ್, ಮಲ್ಲಯ್ಯ ಬಿ. ಗಣೇಕಲ್, ಶಿವುಕುಮಾರ ಅಕ್ಕರಿಕಿ, ಪಿ. ಶರಣಪ್ಪ ಪರತಪುರ, ಪರ್ವತರೆಡ್ಡಿ ಪಾಟೀಲ್ ಶಾವಂತಗೇರಾ, ಸತೀಶ ಬಂಡೇಗುಡ್ಡ, ಚನ್ನವೀರಯ್ಯಸ್ವಾಮಿ ಅರಕೇರಾ, ನರಸಣ್ಣ ನಾಯಕ ಗಣಜಲಿ, ವ್ಯವಸ್ಥಾಪಕ ಶರಣಬಸವ ವಿ. ಬಳೆ, ಸಿಬ್ಬಂದಿಗಳಾದ ಸರಸ್ವತಿ ಎಸ್. ಹಿರೇಮಠ, ಮಂಜುನಾಥ, ಅಕ್ತರ ಹುಸೇನ್, ಗಂಗಣ್ಣ ಸೇರಿದಂತೆ ಸಂಘದ ಸದಸ್ಯರು ಭಾಗವಹಿಸಿದ್ದರು.

ರಸ್ತೆಯೋ, ಕೆಸರುಗದ್ದೆಯೋ? ಐದನಾಳ ಎಸ್‌ಸಿ ವಾರ್ಡ್‌ನಲ್ಲಿ ಜನರ ಪರದಾಟ

ಚರಂಡಿ ನೀರಿನಲ್ಲೇ ಸಾಗಬೇಕಾಗಿದೆ. ಇದರಿಂದ ಮಕ್ಕಳಿಗೆ ಚರ್ಮದ ಸಮಸ್ಯೆಗಳು ಕಾಣಿಸಿಕೊಳ್ಳುತ್ತಿವೆ. ಅಧಿಕಾರಿಗಳು ಕೂಡಲೇ ಗಮನ ಹರಿಸಿ ರಸ್ತೆ ಹಾಗೂ ಚರಂಡಿ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿ ಸಿದರು.

ಪರ್ಯಾಯ ನೀರು ಹರಿವು ವ್ಯವಸ್ಥೆ: ತಹಶೀಲ್ದಾರ್

ಸಮಸ್ಯೆ ಕುರಿತು ಪ್ರತಿಕ್ರಿ ಯಿಸಿದ ತಹಶೀಲ್ದಾರ ಚರಂಡಿ ನೀರು ಹರಿದು ಹೋಗುವ ದಿಕ್ಕಿನಲ್ಲಿ ಮುಂದೆ ಹೊಲಗಳು ಇರುವುದರಿಂದ ಸಮಸ್ಯೆ ಉಂಟಾಗಿರುವ ಬಗ್ಗೆ ಪರಿಶೀಲನೆ ನಡೆಸಿ, ನೀರು ಸರಾಗವಾಗಿ ಹರಿದು ಹೋಗಲು ಪರ್ಯಾಯ ವ್ಯವಸ್ಥೆ ಕಲ್ಪಿಸುವ ಕುರಿತು ಕ್ರಮ ಕೈಗೊಳ್ಳ ಲಾಗುವುದು ಎಂದು ಭರವಸೆ ನೀಡಿದರು.

ಗ್ರಾಮ ಪಂಚಾಯಿತಿ ವ್ಯಾಪ್ತಿ ಯಲ್ಲಿರುವ ಎಸ್‌ಸಿ ವಾರ್ಡ್‌ನ ಮೂಲಸೌಕರ್ಯ ಸಮಸ್ಯೆಯನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ, ಹದಗೆಟ್ಟ ರಸ್ತೆಗಳ ದುರಸ್ತಿ, ಸಮರ್ಪಕ ಚರಂಡಿ ನಿರ್ಮಾಣ ಹಾಗೂ ಮಳೆ ನೀರು ನಿಲ್ಲದಂತೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಮಹಿಳೆಯರು ಆಗ್ರಹಿಸಿದ್ದಾರೆ. ಸಮಸ್ಯೆ ಮುಂದುವರಿದರೆ ಮುಂದಿನ ದಿನಗಳಲ್ಲಿ ಮತ್ತಷ್ಟು ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಸ್ಥಳೀಯರು ಎಚ್ಚರಿಕೆ ನೀಡಿದ್ದಾರೆ.

ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸಮರ್ಪಕ ಕಸ ವಿಲೇವಾರಿ ಮಾಡಿ: ಎಚ್‌ಡಿಎಂಸಿಗೆ ಜಿಲ್ಲಾಧಿಕಾರಿ ಸೂಚನೆ

ಧಾರವಾಡ ,ಸೆ.26-

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಅಧಿಕಾರಿಗಳು ತಮ್ಮ ಕಾರ್ಯಗಳ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ನಿರಂತರವಾಗಿ ಅಪಡೇಟ್ ಮಾಡಬೇಕು ಹಾಗೂ ಸಾರ್ವಜನಿಕರೊಂದಿಗೆ ಸಂಪರ್ಕದಲ್ಲಿರಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಸೂಚಿಸಿದರು.

ಅವರು ಇಂದು (ಸೆ.25) ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಭವನದಲ್ಲಿ ಸ್ವಚ್ಛತಾ ಹೀ ಸೇವಾ ಅಭಿಯಾನದ ಸ್ವಚ್ಛತೆಯಲ್ಲಿ ಸಹಭಾಗಿತ್ವ, ಸ್ವಚ್ಛ ಭಾರತ ವಿಕಸಿತ ಭಾರತ ಕುರಿತು ಸಭೆ ಜರುಗಿಸಿ, ಮಾತನಾಡಿದರು.

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಕೈಗೊಳ್ಳುತ್ತಿರುವ ಸ್ವಚ್ಛತಾ ಕಾರ್ಯಕ್ರಮಗಳು ಹಾಗೂ ನಗರ ಅಭಿವೃದ್ಧಿ ಯೋಜನೆಗಳ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಪ್ರಚಾರವಾಗುವ ಸ್ವಚ್ಛತಾ ಸೇವಾ' ಮುಂತಾದ ವಿಶೇಷ ಅಭಿಯಾನಗಳನ್ನು ಅಂತರ್ ಜಾಲದಲ್ಲಿ ಅಪಡೇಟ್ ಮಾಡಬೇಕು, ರಸ್ತೆಗಳಲ್ಲಿನ ಕಸ ವಿಲೇವಾರಿಯು ಪ್ರತ್ಯಕ್ಷವಾಗಿ ಸಾರ್ವಜನಿಕರಿಗೆ ಕಾಣಿಸುವಂತಾಗಬೇಕು. ಆನ್‌ಲೈನ್ ಸುದ್ದಿ ಮತ್ತು ಸ್ಥಳದಲ್ಲಿನ (ಆನ್-ಗ್ರೌಂಡ್) ಕೆಲಸಗಳು ಪರಸ್ಪರ ಹೊಂದಾಣಿಕೆಯಾದಾಗ ಮಾತ್ರ ಪಾಲಿಕೆಯ ಕೆಲಸಗಳ ಬಗ್ಗೆ ಜನರಲ್ಲಿ ನಂಬಿಕೆ ಮೂಡುತ್ತದೆ ಎಂದು ಅವರು ಹೇಳಿದರು.

ಬಡವರು ಮತ್ತು ಕೊಳಚೆ ಪ್ರದೇಶಗಳಲ್ಲಿ ವಾಸಿಸುವ ಜನರ ಮನೆಗಳಲ್ಲಿ ಕಸವನ್ನು



ಮನೆಯೊಳಗೆ ಇಟ್ಟುಕೊಳ್ಳಲು ಅವರಿಗೆ ಪ್ರತ್ಯೇಕ ಜಾಗವಿಲ್ಲ. ಇದರಿಂದಾಗಿ ಅವರು ಕಸವನ್ನು ಹೊರಗೆ ಎಸೆಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಸಮಸ್ಯೆ ಕುರಿತು ಕಸದ ಸಂಗ್ರಹಣಾ ವಾಹನದ ಬಗ್ಗೆ ಅಥವಾ ಬೇರೆ ವ್ಯವಸ್ಥೆಯ ಕುರಿತು ಸಾರ್ವಜನಿಕರೊಂದಿಗೆ ಚರ್ಚಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಕಸ ಸಂಗ್ರಹಣಾ ವಾಹನಗಳನ್ನು ನಿಗದಿತ ಸಮಯಕ್ಕೆ ಕಳುಹಿಸಬೇಕು ಮತ್ತು ಅಗತ್ಯವಿದ್ದರೆ ಪ್ರತಿ 2 ಗಂಟೆಗೊಮ್ಮೆ ಕಸ ಸಂಗ್ರಹಿಸುವ ವ್ಯವಸ್ಥೆಯನ್ನು ಮಾಡಬೇಕು. ನಿರ್ದಿಷ್ಟ ಸ್ಥಳಗಳಲ್ಲಿ ಸ್ಥಿರ ಕಸದ ಬುಟ್ಟಿಗಳನ್ನು ಇಟ್ಟು, ಜನರು ಅದರಲ್ಲಿ ಕಸ ಹಾಕುವಂತೆ ಪ್ರೇರೇಪಿಸುವ ಯೋಜನೆ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ಸಾರ್ವಜನಿಕರು ಒಣ ಹಾಗೂ ಹಸಿ ತ್ಯಾಜ್ಯವನ್ನು ವಿಂಗಡಿಸಿ ಹಾಕಲು ಸೂಕ್ತವಾದ ವಿಲೇವಾರಿ ಕೇಂದ್ರ (ಚಿಣ ಏಇ) ಗಳನ್ನು ನಿರ್ಮಿಸಬೇಕು. ಪ್ರತಿ ಮನೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಹಸಿ ಕಸ ಮತ್ತು ಒಣ ಕಸವನ್ನು ಪ್ರತ್ಯೇಕವಾಗಿ ಸಂಗ್ರಹಿಸುವ ವ್ಯವಸ್ಥೆ ಮಾಡಬೇಕು. ಅದಕ್ಕಾಗಿ ಎಲ್ಲರಿಗೂ ಪ್ರತ್ಯೇಕವಾದ ಕಸದ ತೊಟ್ಟಿಗಳನ್ನು ಒದಗಿಸುವಂತೆ ಸೂಚಿಸಿದರು.

ಪ್ಲಾಸ್ಟಿಕ್ ಮುಕ್ತ ವಾತಾವರಣ ನಿರ್ಮಾಣಕ್ಕೆ ವಿನೂತನ ಯೋಜನೆಗಳನ್ನು ರೂಪಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು. ಹಲವಾರು ಕಡೆಗಳಲ್ಲಿ ತ್ಯಾಜ್ಯ ಹಾಗೂ ಕಟ್ಟಡ ತ್ಯಾಜ್ಯಗಳು ಬಿದ್ದುಕೊಂಡಿರುವುದು ಕಂಡುಬಂದಿದ್ದು, ಕೆಲವು ಕಡೆ ಮಾತ್ರ ಸ್ವಚ್ಛಗೊಳಿಸಿ ಉಳಿದ ಭಾಗಗಳನ್ನು ಹಾಗೆಯೇ ಬಿಡಲಾಗುತ್ತಿದೆ ಈ ಕುರಿತು ಸರಿಯಾದ ವರದಿ ನೀಡುವಂತೆ ಅಧಿಕಾರಿಗಳಿಗೆ ತಿಳಿಸಿದರು.

ತಾಲೂಕಿನ ಹಳ್ಳಿಗಳಲ್ಲಿ ಎಲ್ಲೆಡೆ ಕಸ ಕಂಡುಬರುತ್ತಿರುವುದು ಆತಂಕಕಾರಿಯಾಗಿದೆ. ಒಂದು ಹಳ್ಳಿಯಲ್ಲೂ ಸಮರ್ಪಕ ತ್ಯಾಜ್ಯ ನಿರ್ವಹಣೆ ನಡೆಯುತ್ತಿಲ್ಲ. ಎಲ್ಲ ಅಧಿಕಾರಿಗಳು ಜವಾಬ್ದಾರಿಯಿಂದ ತಂಡವಾಗಿ ಕಾರ್ಯನಿರ್ವಹಿಸಿ ಗ್ರಾಮಗಳನ್ನು ಸ್ವಚ್ಛವಾಗಿಡಲು ಕ್ರಮ ಕೈಗೊಳ್ಳಬೇಕು. ಮಿಶ್ರ ಕಸ ನೀಡುತ್ತಿರುವ ಪ್ರದೇಶಗಳಲ್ಲಿ ಸಂಬಂಧಿಸಿದವರಿಗೆ ನೋಟಿಸ್ ನೀಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಖಾಸಗಿ ಸಂಘ ಸಂಸ್ಥೆಗಳು ಸ್ವಯಂಪ್ರೇರಿತರಾಗಿ ರಸ್ತೆ ಬದಿಯಲ್ಲಿರುವ ಕಸವನ್ನು ಸ್ವಚ್ಛಗೊಳಿಸಿದರೆ, ಅಂತಹ ಸಂಸ್ಥೆಗಳಿಗೆ ಬೇಕಾದ ಉಪಕರಣಗಳು, ಸೌಲಭ್ಯಗಳನ್ನು ನೀಡಿ ಸಹಾಯ ಒದಗಿಸಬೇಕು ಹಾಗೂ ಅವರನ್ನು ಗೌರವಿಸಿ, ಸನ್ಮಾನಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಸದಿಂದ ಈಗಲೇ ದೊಡ್ಡ ಮಟ್ಟದ ರೋಗಗಳು ಕಾಣಿಸದಿದ್ದರೂ, ಮುಂದಿನ ದಿನಗಳಲ್ಲಿ ಅದರ ದುಷ್ಪರಿಣಾಮಗಳನ್ನು ಎದುರಿಸಬೇಕಾಗಬಹುದು. ಆದ್ದರಿಂದ ತ್ಯಾಜ್ಯ ನಿರ್ವಹಣೆಯನ್ನು ಗಂಭೀರವಾಗಿ ಪರಿಗಣಿಸಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಅವರು ಹೇಳಿದರು.

ಸಭೆಯಲ್ಲಿ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಜಿ.ಪಂ. ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಎಲ್ಲ ತಾಲೂಕಿನ ತಹಶೀಲ್ದಾರರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದ್ದರು.

ರಾಜ್ಯ ಸರಕಾರದ ವಿರುದ್ಧ ಬಿಜೆಪಿಯಿಂದ ಅಣಕು ಶವಯಾತ್ರೆ



ಯಾದಗಿರಿ,ಸೆ.26-

ರಾಜ್ಯ ಸರಕಾರ ಆರ್ಥಿಕವಾಗಿ ದಿವಾಳಿಯಾಗಿದೆ ಎಂದು ಆರೋಪಿಸಿ ಜಿಲ್ಲಾ ಬಿಜೆಪಿ ವತಿಯಿಂದ ಯಾದಗಿರಿ ನಗರದ ಶುಭಸ್ವತ ವೃತ್ತದಲ್ಲಿ ಅಣಕು ಶವಯಾತ್ರೆ ನಡೆಸಿ ರಾಜ್ಯ ಸರಕಾರದ ವಿರುದ್ಧ ಪ್ರತಿಭಟನೆ ನಡೆಸಲಾಯಿತು. ಪ್ರತಿಭಟನಾಕಾರರು ಸರಿಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ತಹಸೀಲ್ದಾರರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಬಿಜೆಪಿ ಜಿಲ್ಲಾಧ್ಯಕ್ಷ ಬಸವರಾಜಪ್ಪ ಗೌಡ ವಿಭೂತಿಹಳ್ಳಿ ಮಾತನಾಡಿ, ರಾಜ್ಯದ ಕಾಂಗ್ರೆಸ್ ಸರಕಾರ ಅಭಿವೃದ್ದಿಯಲ್ಲಿ ವಿಫಲವಾಗಿದ್ದು, ಬಡವರು, ರೈತರು, ಮಹಿಳೆಯರು ಹಾಗೂ ಯುವಕರಿಗೆ ಅನ್ಯಾಯ ಮಾಡುತ್ತಿದೆ ಎಂದು ಆರೋಪಿಸಿದರು.

ಸರಕಾರ ಗರಿಷ್ಠ ಪ್ರಮಾಣದಲ್ಲಿ ಸಾಲ ಮಾಡಿದ್ದರೂ ಅಭಿವೃದ್ಧಿಗೆ ಅಗತ್ಯ ಅನುದಾನ ನೀಡುತ್ತಿಲ್ಲ ಎಂದು ದೂರಿದರು. ರಾಜ್ಯದ ಹಣಕಾಸಿನ ವಾಸ್ತವಿಕ ಸ್ಥಿತಿಯನ್ನು ಜನರ ಮುಂದಿಡಲು ಶ್ವೇತಪತ್ರ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು.

ಬಿಜೆಪಿ ಹಿರಿಯ ಮುಖಂಡ ರಾಚಣ್ಣಗೌಡ ಮುದ್ನಾಳ ಮಾತನಾಡಿ, ರಾಜ್ಯ ಸರಕತಾರದ ಆಡಳಿತದಲ್ಲಿ ಜನಸಾಮಾನ್ಯರ ಮೂಲಭೂತ ಸಮಸ್ಯೆಗಳಿಗೆ ಸಮರ್ಪಕ ಸ್ಪಂದನೆ ದೊರೆಯುತ್ತಿಲ್ಲ ಎಂದು ಆರೋಪಿಸಿದರು.

ಬಿಜೆಪಿ ರಾಜ್ಯ ಕಾರ್ಯಕಾರಿಣಿ ಸದಸ್ಯ ಮಹೇಶರಡ್ಡಿ ಗೌಡ ಮುದ್ನಾಳ ಮಾತನಾಡಿ, ರಾಜ್ಯದಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಸಮರ್ಪಕ ಅನುದಾನ ನೀಡಲಾಗುತ್ತಿಲ್ಲ ಎಂಬ ಆರೋಪಗಳು ಕೇಳಿಬರುತ್ತಿವೆ. ಬಡವರ ಸಾಮಾಜಿಕ ಭದ್ರತಾ ಯೋಜನೆಗಳು, ವಿದ್ಯಾರ್ಥಿಗಳ ಸೌಲಭ್ಯಗಳು ಹಾಗೂ ಯುವಕರಿಗೆ ಉದ್ಯೋಗಾವಕಾಶಗಳ ವಿಚಾರದಲ್ಲಿ ಸರಕಾರ ಸ್ಪಷ್ಟಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಜಿಲ್ಲಾ ಉಪಾಧ್ಯಕ್ಷರಾದ ಅಡಿವೆಪ್ಪ ಜಾಕ್, ಪ್ರಭಾವತಿ ಕಲಾಲ್, ವೆಂಕಟಪ್ಪ ಅವಂಗಾಪುರ, ನರಸಿಂಹಲು ನಿರೇಟಿ, ಬಸವರಾಜ ಸೋನದ, ಪ್ರಧಾನ ಕಾರ್ಯದರ್ಶಿಗಳಾದ ಶಿವರಾಜ್ ದೇಶಮುಖ, ಸಿದ್ದನಗೌಡ ವಡಗೇರಿ, ಗ್ರಾಮೀಣ ಮಂಡಲ ಅಧ್ಯಕ್ಷ ರಾಜಶೇಖರ್ ಕಾಡಮನೂರು, ನಗರ ಪ್ರಧಾನ ಕಾರ್ಯದರ್ಶಿಗಳಾದ ಮಲ್ಲಿಕಾರ್ಜುನ ಕಟ್ಟಿಮನಿ, ರಮೇಶ್ ದೊಡ್ಡಮನಿ ಸೇರಿದಂತೆ ಹಲವು ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.



ದಸರಾ ಕ್ರೀಡಾಕೂಟ ಗ್ರಾಮೀಣ ಪ್ರತಿಭೆಗಳಿಗೆ ಸೂಕ್ತ ವೇದಿಕೆ - ಡಾ. ಪುಷ್ಪಾ ಅಮರನಾಥ್

ಮೈಸೂರು, ಸೆ.26-

ಗ್ರಾಮೀಣ ಭಾಗದ ಮತ್ತು ವಿವಿಧ ತಾಲೂಕುಗಳಿಂದ ಆಗಮಿಸಿರುವ ಕ್ರೀಡಾಪಟುಗಳಿಗೆ, ವಿಶೇಷವಾಗಿ ಹೆಣ್ಣುಮಕ್ಕಳಿಗೆ ದಸರಾ ಕ್ರೀಡಾಕೂಟವು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ದೊಡ್ಡ ವೇದಿಕೆಯಾಗಿದೆ ಎಂದು ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷರಾದ ಡಾ. ಪುಷ್ಪ ಅಮರನಾಥ್ ಅವರು ತಿಳಿಸಿದರು.

ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮೈಸೂರು ಹಾಗೂ ಕರ್ನಾಟಕ ಕ್ರೀಡಾ ಪ್ರಾಧಿಕಾರ ಹಾಗೂ 2026-27 ನೇ ಮೈಸೂರು ಜಿಲ್ಲಾಮಟ್ಟದ ದಸರಾ ಕ್ರೀಡಾಕೂಟ ವನ್ನು ಮೈಸೂರು ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯ ವಿವಿಧ ತಾಲೂಕುಗಳಿಂದ ಹಾಗೂ ಗ್ರಾಮೀಣ ಪ್ರದೇಶಗಳಿಂದ ಆಗಮಿಸಿರುವ ಕ್ರೀಡಾಪಟುಗಳು, ವಿದ್ಯಾರ್ಥಿಗಳು ಮತ್ತು ಕ್ರೀಡಾಸಕ್ತರಿಗೆ ಅಭಿನಂದನೆಗಳನ್ನು ಸಲ್ಲಿಸಿದರು.

ಪ್ರತಿ ತಾಲೂಕಿನಿಂದಲೂ 150ಕ್ಕೂ ಹೆಚ್ಚು ಮಕ್ಕಳು ಕ್ರೀಡಾಕೂಟದಲ್ಲಿ ಭಾಗವಹಿಸುತ್ತಿರುವುದು ಪ್ರಶಂಸನೀಯ ಎಂದು ಹೇಳಿದರು.

ಕ್ರೀಡೆಯಲ್ಲಿ ಕೇವಲ ಗೆಲುವು-ಸೋಲು ಮುಖ್ಯವಲ್ಲ ಕ್ರೀಡಾಪಟುಗಳಿಗೆ ದೈಹಿಕ ಸಮತೋಲನದ ಜೊತೆಗೆ ಮಾನಸಿಕ ಸದೃಢತೆ ಅಗತ್ಯ ಎಂದರು .

ಬಿಸಿಲಿನ ವಾತಾವರಣವಿರುವುದರಿಂದ ಕ್ರೀಡಾಪಟುಗಳು ನಿರ್ಜಲೀಕರಣಕ್ಕೆ ಒಳಗಾಗದಂತೆ ಅಧಿಕಾರಿಗಳು ಅವರ ಆರೋಗ್ಯ ಮತ್ತು ಆರೈಕೆಗೆ ಅಗತ್ಯ ಮುನ್ನೆಚ್ಚರಿಕೆ ವಹಿಸಿದ್ದಾರೆ ಎಂದು ಅವರು ತಿಳಿಸಿದರು .

ಯುವಜನರ ಪ್ರತಿಭೆಯನ್ನು ಉತ್ತೇಜಿಸಲು ಹಾಗೂ ಕ್ರೀಡೆ, ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಪ್ರೋತ್ಸಾಹಿಸಲು ಸರ್ಕಾರವು ಪಂಚಾಯಿತಿ ಮಟ್ಟದಲ್ಲಿ ಯುವಕರ ತಂಡಗಳನ್ನು ರಚಿಸುತ್ತಿದೆ. ಜಿಲ್ಲೆಯಲ್ಲಿ ಈಗಾಗಲೇ 440ಕ್ಕೂ ಹೆಚ್ಚು 'ಭಾರತ್ ಜೋಡೋ ಯುವಕರ ಸಂಘ'ಗಳನ್ನು ರಚಿಸಲಾಗಿದ್ದು, ಮುಂದಿನ ದಿನಗಳಲ್ಲಿ ಗ್ಯಾರಂಟಿ ಪಂಚಾಯಿತಿ ಸಮಿತಿಗಳ ಮೂಲಕ ಯುವಕರು ನೋಂದಾಯಿಸಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಭಾಸ್ಕರ್ ನಾಯಕ್, ಮೂಡಾ ಕಾರ್ಯದರ್ಶಿ ಜಾನ್ಸ್.ಕೆ, ಮುಖಂಡರಾದ ಗಣೇಶ್ ಮೂರ್ತಿ ಹಾಗೂ ಇಲಾಖೆಯ ಅಧಿಕಾರಿಗಳು ಹಾಗೂ ಕ್ರೀಡಾಪಟುಗಳು ಉಪಸ್ಥಿತರಿದ್ದರು.

ಪೂರ್ಣಿಮಾ ಕಾಲೇಜಿನಲ್ಲಿ ಆಯುರ್ವೇದಿಕ್ ದಿನಾಚರಣೆ

ಆಯುರ್ವೇದವು ಪ್ರಾಚೀನ ಮತ್ತು ಸಮಗ್ರ ಜೀವನ ವಿಜ್ಞಾನವಾಗಿದೆ : ಡಾ. ಬಿರಾದಾರ



ರಾಯಚೂರು,ಸೆ.26- ಸ್ಥಳೀಯ ಪೂರ್ಣಿಮಾ ಆಯುರ್ವೇದ ಮಹಾವಿದ್ಯಾಲಯ ,ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರ ರಾಯಚೂರಿನಲ್ಲಿ. 11 ನೇರಾಷ್ಟ್ರೀಯ ಆಯುರ್ವೇದ ದಿನಾಚರಣೆಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿದ್ದ ಸಚಿಗೆ ನೀರಾಕುವುದುರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಡಾ.ದಂಡಪ್ಪ ಬಿರಾದಾರ ಜಿಲ್ಲಾ ಸಂಚಾಲಕರು ಭಾರತೀಯ ರೆಡ್ ಕ್ರಾಸ್ ಸಂಸ್ಥೆ ರಾಯಚೂರು ಮಾತನಾಡತ. ಇಂದಿನ ಒತ್ತಡ ಜೀವನ ಶೈಲಿಗೆ ರೋಗಗಳು ಸರ್ವೇಸಾಮಾನ್ಯ ಇಂತಹ ರೋಗಗಳನ್ನು ತಡೆಗಟ್ಟಲು ಆಯುರ್ವೇದದಲ್ಲಿ ತಿಳಿಸಿದ ಆರೋಗ್ಯಕರ ಜೀವನ ಶೈಲಿಯನ್ನು ಅಳವಡಿಸಿಕೊಳ್ಳಬೇಕು ಆಯುರ್ವೇದವು ದೇಹ ಮನಸ್ಸು ಆತ್ಮಗಳ ಸಮತೋಲನ ಕಾಪಾಡಿಕೊಳ್ಳಲು ಸಹಕಾರಿ ಆಗುತ್ತದೆ.

ಮುಂದಿನ ದಿನಗಳಲ್ಲಿ ಆಯುರ್ವೇದ ಅತ್ಯವಶ್ಯಕ ವೈದ್ಯಕೀಯ ಪದ್ಧತಿ ಆಗಲಿದೆ, ಇದು ಪುರಾತನ ಕಾಲದಿಂದಲೂ ಜನರ ಆರೋಗ್ಯ ಕಾಪಾಡಿಕೊಳ್ಳುವ ಪ್ರಮುಖ ಸಾಧನವಾಗಿದೆ, ಇದು ನಿಧಾನವಾದ ಚಿಕಿತ್ಸೆಯಾದರೂ ಫಲಿತಾಂಶ ಮಾತ್ರ ಪ್ರಧಾನವಾಗಿರುತ್ತದೆ. ರಾಮಾಯಣ ಮಹಾಭಾರತ ಕಾಲದಿಂದಲೂ ಈ ಚಿಕಿತ್ಸೆ ಪದ್ಧತಿ ಭಾರತದಲ್ಲಿ ರೂಢಿಯಲ್ಲಿದೆ ಭಾರತ ದೇಶದ ಯೋಗ ಅಭ್ಯಾಸವು ಇಂದು ಜಗತ್ತಿನ ನೂರಾರು ರಾಷ್ಟ್ರಗಳಲ್ಲಿ ಯುಗ ದಿನಾಚರಣೆಯನ್ನ ಆಚರಣೆ ಮಾಡಲಾಗುತ್ತದೆ.

ನಮ್ಮ ಆಹಾರ ಪದ್ಧತಿ ನಮ್ಮ ಜೀವನ ಕ್ರಮವೂ ಮತ್ತು ಇನ್ನಿತರ ಉತ್ತಮ ಹವ್ಯಾಸಗಳು ಕ್ರಮಬದ್ಧವಾಗಿರಬೇಕು. ವಿದ್ಯಾರ್ಥಿಗಳು ಆಯುರ್ವೇದದ ಸಮಗ್ರ ಅಧ್ಯಯನ ಮಾಡಿ ಈಗಿನ ಕಾಲದ ಸವಾಲಿನ ರೋಗಗಳಿಗೆ ಸಂಪೂರ್ಣ ಪರಿಣಾಮಕಾರಿ ಚಿಕಿತ್ಸೆ ನೀಡುವಂತಾಗಲಿ ಎಂದು ಡಾ. ಬಿರಾದಾರ ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಚಂದ್ರಶೇಖರರಡ್ಡಿ ಕರಮುಡಿ ಮಾತನಾಡಿ ಆಯುರ್ವೇದವು ನಮ್ಮ ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಾಯಕ ಮಾಡುವ ಪ್ರಾಚೀನ ಹಾಗೂ ಸಮಗ್ರ ವೈದ್ಯಕೀಯ ವಿಜ್ಞಾನವಾಗಿದೆ . ಆಯುರ್ವೇದವು ರೋಗಗಳು ಬರುವ ಮುನ್ನವೇ ಅವುಗಳನ್ನು ತಡೆಗಟ್ಟಲು ಮತ್ತು ಜೀವನಶೈಲಿ ಸುಧಾರಿಸಲು ಹೆಚ್ಚು ಒತ್ತು ನೀಡುತ್ತದೆ ಗಿಡಮೂಲಿಕೆಗಳು ,ನೈಸರ್ಗಿಕ ಮತ್ತು ಅಡ್ಡ ಪರಿಣಾಮಗಳಿಲ್ಲದೆ ರೋಗ ನಿವಾರಿಸಲು ಪರಿಣಾಮಕಾರಿ ಆಗಿದೆ, ಇಂತಹ ಆಯುರ್ವೇದವನ್ನು ಉಳಿಸಿ ಬೆಳೆಸಿ ಮುಂದಿನ ಪೀಳಿಗೆಗೆ ಕೊಂಡೊಯ್ಯುವ ಜವಾಬ್ದಾರಿ ನಮ್ಮ ಮೇಲೆ ಇದೆ ಎಂದರು.

ಸಂಯೋಜಕರಾದ ಡಾಕ್ಟರ್ ಉಮಾ ಯಾಳಗಿ ಮಾತನಾಡಿ 11ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಅಂಗವಾಗಿ ಮಹಾವಿದ್ಯಾಲಯದ ವತಿಯಿಂದ ಆರೋಗ್ಯ ಮಾಹಿತಿ ಶಿಬಿರ, ಉಚಿತ ಆರೋಗ್ಯ ಶಿಬಿರ, ಪ್ರಬಂಧ ಸ್ಪರ್ಧೆ, ರಸಪ್ರಶ್ನೆ ಕಾರ್ಯಕ್ರಮ, ಚಿತ್ರಪಟ ಪ್ರದರ್ಶನ, ಯೋಗ ಮಾಹಿತಿ ಶಿಬಿರ, ಆಯುರ್ವೇದ ಜಾಥಾ,ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು ಎಂದು ಪ್ರಾಸ್ತಾವಿಕವಾಗಿ ಮಾತನಾಡಿದರು

ಕಾರ್ಯಕ್ರಮದ ವೇದಿಕೆಯ ಮೇಲೆ ಡಾ. ನಂದಾ, ಡಾ. ಸೌಮ್ಯ, ಡಾ. ಶೃತಿಕ, ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಕಾಲೇಜಿನ ಉಪನ್ಯಾಸಕರು ಹಾಗೂ ಎಲ್ಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಸಿಯುಕೆ: ಭಾರತೀಯ ಜ್ಞಾನ ವ್ಯವಸ್ಥೆ; ಒಂದು ಪರಿಚಯ ಕುರಿತು ವಿಶೇಷ ಉಪನ್ಯಾಸ

ಕಲಬುರಗಿ,ಸೆ 26

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ (ಸಿ.ಯು.ಕೆ.) ಇಂಗ್ಲಿಷ್ ಮತ್ತು ವಿದೇಶಿ ಭಾಷೆಗಳ ವಿಭಾಗ ಹಾಗೂ ಭಾಷಾಶಾಸ್ತ್ರ ವಿಭಾಗ ಜಂಟಿಯಾಗಿ ''ಭಾರತೀಯ ಜ್ಞಾನ ವ್ಯವಸ್ಥೆ: ಒಂದು ಪರಿಚಯ'' ಕುರಿತು ವಿಶೇಷ ಉಪನ್ಯಾಸವನ್ನು ವಿ.ವಿ.ಯ ಆವರಣದಲ್ಲಿ ಆಯೋಜಿಸಲಾಗಿತ್ತು.

ಮುಖ್ಯ ಭಾಷಣಕಾರರಾಗಿ ಮಾತನಾಡಿದ ಯುವ ವಿದ್ವಾಂಸ ಹಾಗೂ ಇಂಡಿಯನ್ ನಾಲೇಜ್ ಸಿಸ್ಟಮ್ ಕೃತಿಯ ಸಹ-ಲೇಖಕ ಅಂಶುಮಾನ್ ಪಾಂಡಾ, ಭಾರತವು ಸಾವಿರಾರು ವರ್ಷಗಳ ಶ್ರೀಮಂತ ಹಾಗೂ ನಿರಂತರ ಜ್ಞಾನ ಪರಂಪರೆಯನ್ನು ಹೊಂದಿರುವ ದೇಶವಾಗಿದೆ ಎಂದು ಹೇಳಿದರು. ಮಾನವೀಯ ಮೌಲ್ಯಗಳು, ನೈತಿಕತೆ, ಸಾಹಿತ್ಯ, ತತ್ತ್ವಶಾಸ್ತ್ರ, ಗಣಿತ, ವಿಜ್ಞಾನ, ವೈದ್ಯಕೀಯ ಮತ್ತು ತಂತ್ರಜ್ಞಾನ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಭಾರತೀಯ ಜ್ಞಾನ



ಪರಂಪರೆಯು ಮಹತ್ವದ ಕೊಡುಗೆ ನೀಡಿದೆ ಎಂದು ಅವರು ತಿಳಿಸಿದರು.

ಭಾರತೀಯ ಜ್ಞಾನ ವ್ಯವಸ್ಥೆ (ಐಕೆಎಸ್) ಕೇವಲ ಭಾರತಕ್ಕೆ ಸೀಮಿತವಾಗಿರದೆ ಜಾಗತಿಕ ಪ್ರಸ್ತುತತೆಯನ್ನು ಹೊಂದಿದೆ. ಸಾಂಪ್ರದಾಯಿಕ ಜ್ಞಾನವನ್ನು ಆಧುನಿಕತೆ, ತಂತ್ರಜ್ಞಾನ ಮತ್ತು ನಾವೀನ್ಯತೆಯೊಂದಿಗೆ ಅರ್ಥಪೂರ್ಣವಾಗಿ ಸಂಯೋಜಿಸುವ ಮೂಲಕ ಸಮಕಾಲೀನ ಸಮಾಜಕ್ಕೆ ಉಪಯುಕ್ತವಾಗಿಸಬಹುದು ಎಂದು ಅವರು ಹೇಳಿದರು. ಶಿಕ್ಷಣದ ಅವಿಭಾಜ್ಯ ಅಂಗವಾಗಿ ಐಕೆಎಸ್ ಅನ್ನು ಉತ್ತೇಜಿಸುವಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ) 2020 ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ತಿಳಿಸಿದರು. ಶಾಲಾ ಮತ್ತು ಉನ್ನತ ಶಿಕ್ಷಣದ ಪಠ್ಯಕ್ರಮಗಳಲ್ಲಿ ಭಾರತದ ಸ್ಥಳೀಯ ಹಾಗೂ ಸಾಂಪ್ರದಾಯಿಕ ಜ್ಞಾನ ವ್ಯವಸ್ಥೆಗಳನ್ನು ಅಳವಡಿಸುವ ಮೂಲಕ, ಭಾರತದ ಶ್ರೀಮಂತ ಜ್ಞಾನ ಪರಂಪರೆಯನ್ನು ಸಮಕಾಲೀನ ಶಿಕ್ಷಣ, ಸಂಶೋಧನೆ, ನಾವೀನ್ಯತೆ ಮತ್ತು ಕಲಿಕೆಯೊಂದಿಗೆ ಸಂಪರ್ಕಿಸಲಾಗುತ್ತಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಿ.ಯು.ಕೆ.ಯ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು ಭಾರತೀಯ ಸಾಂಸ್ಕೃತಿಕ ಮೌಲ್ಯಗಳು, ನೈತಿಕತೆ ಹಾಗೂ ಪರಂಪರೆಯನ್ನು ಸಂರಕ್ಷಿಸುವ ಮಹತ್ವವನ್ನು ಒತ್ತಿ ಹೇಳಿದರು. ರಾಮಾಯಣ ಮತ್ತು ಮಹಾಭಾರತದಲ್ಲಿ ಪ್ರತಿಬಿಂಬಿತವಾಗಿರುವ ಮೌಲ್ಯಗಳನ್ನು ಉಲ್ಲೇಖಿಸಿದ ಅವರು, ಹಿರಿಯರಿಗೆ ಗೌರವ, ಕೌಟುಂಬಿಕ ಮೌಲ್ಯಗಳು, ನೈತಿಕ ನಡವಳಿಕೆ ಹಾಗೂ ಸಾಮಾಜಿಕ ಹೊಣೆಗಾರಿಕೆಯ ಮಹತ್ವವನ್ನು ವಿವರಿಸಿದರು. ''ಯುವಜನರು ಆಧುನಿಕ ವಿಜ್ಞಾನ ಮತ್ತು ತಂತ್ರಜ್ಞಾನವನ್ನು ಅಳವಡಿಸಿಕೊಳ್ಳುವುದರ ಜೊತೆಗೆ ಭಾರತದ ಸಾಂಸ್ಕೃತಿಕ ಹಾಗೂ ಬೌದ್ಧಿಕ ಪರಂಪರೆಯನ್ನು ಅರ್ಥಮಾಡಿಕೊಂಡು ಮುಂದುವರಿಸಿಕೊಂಡು ಹೋಗಬೇಕು'' ಎಂದು ಅವರು ಕರೆ ನೀಡಿದರು.

ಭಾಷಾಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಕೋಟಾ ಸಾಯಿ ಕೃಷ್ಣ ಮಾತನಾಡಿ, ''ವಸುಧೈವ ಕುಟುಂಬಕಮ್'' ಎಂಬ ಭಾರತೀಯ ತತ್ತ್ವವು ಇಡೀ ಜಗತ್ತನ್ನು ಒಂದು ಕುಟುಂಬವೆಂದು ಪರಿಗಣಿಸುವ ಪರಿಕಲ್ಪನೆಯನ್ನು ಪ್ರತಿಬಿಂಬಿಸುತ್ತದೆ ಹಾಗೂ ಮನುಷ್ಯ ಮತ್ತು ಪ್ರಕೃತಿಯ ನಡುವಿನ ಸಾಮರಸ್ಯವನ್ನು ಒತ್ತಿಹೇಳುತ್ತದೆ ಎಂದು ಹೇಳಿದರು. ಯುವಜನರು ದೇಶದ ಮೌಲ್ಯಗಳನ್ನು ಎತ್ತಿಹಿಡಿದು, ರಾಷ್ಟ್ರ ನಿರ್ಮಾಣದಲ್ಲಿ ಕೊಡುಗೆ ನೀಡಬೇಕು ಹಾಗೂ ಸ್ವಾವಲಂಬನೆ ಮತ್ತು ''ವಿಕಸಿತ ಭಾರತ 2047ರ ಗುರಿಯತ್ತ ಶ್ರಮಿಸಬೇಕು ಎಂದು ಕರೆ ನೀಡಿದರು. ಡಾ. ರವಿ ಜೆ. ಖಂಗೈ, ಡಾ. ಗಣಪತಿ ಬಿ. ಸಿನ್ನೂರು, ಪ್ರೊ. ಸಂದೀಪ್ ಪ್ರೊ. ಮನೋಹರ ಭಂಡಾರೆ, ಪ್ರೊ. ದೇವರಾಜಪ್ಪ, ಡಾ. ಪ್ರಕಾಶ್ ಬಾಳಿಕಾಯಿ, ಡಾ. ಮುದನಾರ್ ದತ್ತಾ, ಸೇರಿದಂತೆ ವಿವಿಧ ವಿಭಾಗಗಳ ಬೋಧಕ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ಪ್ರಜಾಪ್ರಭುತ್ವದ ಕೊಲೆಗಾರ, 'ಮೋಶಾ' ಸೂತ್ರದ ಬೊಂಬೆ ಗ್ಯಾನೇಶ್ ಕುಮಾರ್ ವಜಾಗೊಳ್ಳಬೇಕು!

ಮೋದಿ-ಅಮಿತ್ ಶಾರ 'ಅಧಿಕಾರದಾಹ'ಕ್ಕೆ ಇಡೀ ಚುನಾವಣಾ ಆಯೋಗವನ್ನೇ ಬಲಿಪಶು ಮಾಡಿ, ದೇಶದ 96 ಕೋಟಿ ಮತದಾರರ ಭವಿಷ್ಯವನ್ನು ಅಪಾಯಕ್ಕೆ ತಳ್ಳಿರುವ ಈ ಗ್ಯಾನೇಶ್ ಕುಮಾರ್ ಎಂಬ ಮಹಾಶಯ ಒಂದು ಕ್ಷಣವೂ ಆ ಹುದ್ದೆಯಲ್ಲಿ ಮುಂದುವರಿಯಲು ಅರ್ಹರಲ್ಲ. ಸಂಸತ್ತು ಮತ್ತು ನ್ಯಾಯಾಂಗ ತಕ್ಷಣವೇ ಮಧ್ಯಪ್ರವೇಶಿಸಿ ಈ ಪ್ರಜಾಪ್ರಭುತ್ವದ ಕೊಲೆಗಡುಕನನ್ನು ಹುದ್ದೆಯಿಂದ ವಜಾಗೊಳಿಸಬೇಕು.

ಪ್ರಜಾಪ್ರಭುತ್ವದ ಅಡಿಪಾಯವೇ ಅಪವಿತ್ರಗೊಳ್ಳುತ್ತಿದೆ. ಸಂವಿಧಾನದ ಬೆನ್ನೆಲುಬಾಗಿ ಕಾರ್ಯನಿರ್ವಹಿಸಬೇಕಿದ್ದ ಅತ್ಯುನ್ನತ ಸಂಸ್ಥೆಯಾದ ಚುನಾವಣಾ ಆಯೋಗ ಆಡಳಿತಾರೂಢರ ದಾಸನಾಗಿ ಮಾರ್ಪಟ್ಟಿದೆ. ಪ್ರಜೆಗಳ ಪವಿತ್ರ ಮತದಾನದ ಹಕ್ಕು ಹಗಲುದರೋಡೆಯಾಗುತ್ತಿದೆ. ದೇಶದ ಪ್ರಜೆಗಳ ಮತಾಧಿಕಾರ ದಮನವಾಗುತ್ತಿದೆ. ಚುನಾವಣಾ ವ್ಯವಸ್ಥೆಯು ಸವಾರ್ಧಿಕಾರಿ ಮನೋಭಾವವುಳ್ಳ ಮುಖ್ಯ ಚುನಾವಣಾ ಆಯುಕ್ತ ಗ್ಯಾನೇಶ್ ಕುಮಾರ್, ಪ್ರಧಾನಿ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಕೈಗೆ ಸಿಕ್ಕು ನಲುಗುತ್ತಿದೆ. ಇದೆಲ್ಲೂ ಈಗ ಬಹಿರಂಗವಾಗಿದೆ.

ದಿ ಇಂಡಿಯನ್ ಎಕ್ಸ್ ಪ್ರೆಸ್ ಪತ್ರಿಕೆಯ ರಿತಿಕಾ ಚೋಪ್ರಾ ನೇತೃತ್ವದ ತಂಡ ನಡೆಸಿದ ತನಿಖಾ ವರದಿ ಬಹಿರಂಗಪಡಿಸಿರುವ ಸತ್ಯಗಳು ಬರಿ ಆಘಾತಕಾರಿಯಷ್ಟೇ ಅಲ್ಲ, ಭಾರತೀಯ ರಾಜಕೀಯ ಇತಿಹಾಸದಲ್ಲೇ ನಡೆದ ಅತ್ಯಂತ ಅಸಹ್ಯ ಮತ್ತು ಕ್ರೂರ ಷಡ್ಯಂತ್ರ. ಪ್ರಜಾಪ್ರಭುತ್ವದ ಕಗ್ಗೊಲೆಯ ಕೃತ್ಯ.

ಚುನಾವಣಾ ಆಯೋಗ ಎಂದರೆ ಅದೊಬ್ಬ ವ್ಯಕ್ತಿಯ ಸಾಮ್ರಾಜ್ಯವಲ್ಲ. ಸಂವಿಧಾನದ ಪ್ರಕಾರ ಆಯೋಗದಲ್ಲಿ ಮೂವರು ಆಯುಕ್ತರು ಸಮಾನ ಅಧಿಕಾರ ಹೊಂದಿದ್ದಾರೆ. ಆದರೆ, ಮುಖ್ಯ ಚುನಾವಣಾ ಆಯುಕ್ತ ಗ್ಯಾನೇಶ್ ಕುಮಾರ್ ಅವರು ಸಂವಿಧಾನಬದ್ಧ ಹುದ್ದೆಯಲ್ಲಿ ಕೂತು, ಆಡಳಿತಾರೂಢ ಮೋದಿ-ಅಮಿತ್ ಶಾ ಜೋಡಿಯ ಸೂತ್ರದ ಬೊಂಬೆಯಂತೆ ವರ್ತಿಸುತ್ತಿದ್ದಾರೆ. ಅವರ ಸರ್ವಾಧಿಕಾರಿ ಧೋರಣೆ ಎಷ್ಟರಮಟ್ಟಿಗೆ ತಲುಪಿದೆಯೆಂದರೆ, ಆಯೋಗದ ಉಳಿದಿಬ್ಬರು ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರನ್ನು ಕಸದ ಬುಟ್ಟಿಗೆ ಎಸೆದು, ಏಕಪಕ್ಷೀಯವಾಗಿ ನಿರ್ಧಾರ ಕೈಗೊಳ್ಳುತ್ತಿದ್ದಾರೆ. ಕಳೆದ 10 ತಿಂಗಳಲ್ಲಿ ಬರೋಬ್ಬರಿ 14 ಬಾರಿ ಲಿಖಿತವಾಗಿ ಆಕ್ಷೇಪ ಎತ್ತಿರುವ ಈ ಇಬ್ಬರು ಆಯುಕ್ತರು, ''ನಮಗೆ ಮಾಹಿತಿಯನ್ನೇ ನೀಡದೆ ಕಾನೂನುಬಾಹಿರ ನಿರ್ಧಾರ ಕೈಗೊಳ್ಳಲಾಗುತ್ತಿದೆ, ವೋಟರ್ ಡೇಟಾಬೇಸ್ ದೆಹಲಿಯಲ್ಲಿ ಕೇಂದ್ರೀಕೃತವಾಗುತ್ತಿದೆ'' ಎಂದು ಸಾರಿ ಹೇಳಿದ್ದಾರೆ. ತಮ್ಮದೇ ಸಹೋದ್ಯೋಗಿಗಳ ಆಕ್ಷೇಪಗಳಿಗೂ ಕಿವಿಕೊಡದ ಗ್ಯಾನೇಶ್ ಕುಮಾರ್, ಸಂವಿಧಾನಕ್ಕಿಂತ ತಾನೇ ದೊಡ್ಡವನೆಂದು ಬೀಗುತ್ತಿದ್ದಾರೆ!

ಗ್ಯಾನೇಶ್ ಕುಮಾರ್ ಎಸಗಿರುವ ಕೃತ್ಯಗಳು ಒಂದೆರಡಲ್ಲ; ಅವರು 10 ತಿಂಗಳಲ್ಲಿ 14 ಬಾರಿ ಆಯುಕ್ತರಾದ ಸಂಧು ಮತ್ತು ಜೋಶಿ ಅವರಿಂದ ಲಿಖಿತ ಆಕ್ಷೇಪಣೆಗಳನ್ನು ನಿರ್ಲಕ್ಷಿಸಿದ್ದಾರೆ. ಮೋಶಾ ಅಣತಿಯಂತೆ ಏಕಪಕ್ಷೀಯವಾಗಿ ವಿಶೇಷ ತೀವ್ರ ಪರಿಷ್ಕರಣೆ'()ಯನ್ನು ದೇಶದ ಮೇಲೆ ಹೇರಿ, 96 ಕೋಟಿ ಮತದಾರರಿಗೆ ತೊಂದರೆ ಕೊಟ್ಟಿದ್ದಾರೆ, 13 ಕೋಟಿ ಮತದಾರರ ಹೆಸರನ್ನು ಡಿಲೀಟ್ ಮಾಡಿದ್ದಾರೆ. ಈ 13 ಕೋಟಿ ಮತದಾರರಲ್ಲಿ ಹೆಚ್ಚಿನವರು ದಲಿತರು, ಬಡವರು, ಅಲ್ಪಸಂಖ್ಯಾತರು, ಮಹಿಳೆಯರು ಹಾಗೂ ವಿರೋಧ ಪಕ್ಷಗಳ ಬೆಂಬಲಿಗರನ್ನೇ ಟಾರ್ಗೆಟ್ ಮಾಡಿ ಪಟ್ಟಿಯಿಂದ ತೆಗೆದುಹಾಕಿದ್ದಾರೆ.

ಇಸಿಐ-ನೆಟ್ ಎಂಬ ಸಾಫ್ಟ್‌ವೇರ್ ಮೂಲಕ ದೆಹಲಿಯಿಂದಲೇ ಅರ್ಹ ಮತದಾರರ ಹೆಸರು ಸೇರ್ಪಡೆಗೂ ಅವಕಾಶ ಕೊಡದೆ, ಸ್ಥಳೀಯ ಇಆರ್‌ಒಗಳ ಅಧಿಕಾರಹರಣ ಮಾಡಿದ್ದಾರೆ. ಅರ್ಹ ಮತದಾರರ ಮತದ ಹಕ್ಕು ಕಸಿದುಕೊಂಡಿದ್ದಾರೆ. ಗೋವಾದಲ್ಲಿ ಅಧಿಕಾರಿಗಳು ಅರ್ಹರೆಂದು ಗುರುತಿಸಿದ್ದರೂ, 97 ಮತದಾರರನ್ನು ಮತಪಟ್ಟಿಗೆ ದೆಹಲಿಯ ಇಸಿಐ-ನೆಟ್ ಸಾಫ್ಟ್‌ವೇರ್ ಸೇರಿಸಲಿಲ್ಲ. ಆದರೆ, ಬಂಗಾಳದಲ್ಲಿ ದೆಹಲಿಯ ಆಯೋಗದ ಲಾಗಿನ್‌ನಿಂದಲೇ 27 ಲಕ್ಷ ಜನರ ವಿರುದ್ಧ ಒಂದೇ ಬಟನ್ ಕ್ಲಿಕ್‌ನಲ್ಲಿ ಲಕ್ಷಾಂತರ ಅಕ್ರಮ ಆಕ್ಷೇಪಣೆಗಳನ್ನು ಸಲ್ಲಿಸಲಾಗಿತ್ತು. ಕಲಬುರಗಿಯ ಆಳಂದ ಕ್ಷೇತ್ರದಲ್ಲಿ 5,994 ಮತದಾರರ ವಿರುದ್ಧ ನಕಲಿ ಅರ್ಜಿಗಳನ್ನು ಸಲ್ಲಿಸಿದ ಅರ್ಜಿದಾರರಿಗೆ ಪ್ರತಿ ಅರ್ಜಿಗೆ 80 ರೂ.ಗಳಂತೆ ಬಿಜೆಪಿಗರು ಹಣ ನೀಡಿದ್ದರು ಎಂಬ ಸತ್ಯವನ್ನು ಎಸ್‌ಐಟಿ ಬಹಿರಂಗಪಡಿಸಿದೆ. ಆದಾಗ್ಯೂ, ಈ ವೋಟ್ ಚೋರಿ ಪ್ರಕರಣದಲ್ಲಿ 18 ತಿಂಗಳಲ್ಲಿ 18 ಬಾರಿ ಪತ್ರ ಬರೆದರೂ ವಿವರ ನೀಡದೆ ಸಾಕ್ಷ್ಯ ಮುಚ್ಚಿಟ್ಟಿದ್ದಾರೆ. ಇದು ಅಕ್ಷರಶಃ ಸೈಬರ್ ದರೋಡೆ!

ಇನ್ನೂ ಮುಂದುವರೆದು, ಫಾರ್ಮ್-7 ಎಂಬ ಮಾರಕ ಅಸ್ತ್ರಗಳನ್ನು ಬಳಸಿಕೊಂಡು ಕೋಟ್ಯಂತರ ಅರ್ಹ ಮತದಾರರ ಹೆಸರುಗಳನ್ನು ಅಳಿಸಲು ಗ್ಯಾನೇಶ್ ಕುಮಾರ್ ಅವಕಾಶ ಮಾಡಿಕೊಟ್ಟಿದ್ದಾರೆ. ಪರಿಣಾಮವಾಗಿ, ಪಶ್ಚಿಮ ಬಂಗಾಳದಲ್ಲಿ 6 ಲಕ್ಷ, ಉತ್ತರ ಪ್ರದೇಶದಲ್ಲಿ 2.6 ಲಕ್ಷ, ಬಿಹಾರದಲ್ಲಿ 3 ಲಕ್ಷ, ಗುಜರಾತ್‌ನಲ್ಲಿ 1.8 ಲಕ್ಷ ಹಾಗೂ ಉತ್ತರಾಖಂಡದಲ್ಲಿ 95,000 ಮತದಾರರು ಮತದ ಹಕ್ಕು ಕಳೆದುಕೊಂಡಿದ್ದಾರೆ. ಕರ್ನಾಟಕದಲ್ಲಿ 67,000 ಮತದಾರರ ವಿರುದ್ಧ ಫಾರ್ಮ್-7 ಸಲ್ಲಿಸಲಾಗಿದೆ. ಈ ಮತದಾರರು ತಮ್ಮ ಮತ ಉಳಿಸಿಕೊಳ್ಳಲು ಕಚೇರಿಯಿಂದ ಕಚೇರಿಗೆ ಅಲೆಯುವಂತೆ ಮಾಡಲಾಗಿದೆ.

ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಗೆದ್ದಿರುವ ಸುಮಾರು 48 ಕ್ಷೇತ್ರಗಳಲ್ಲಿ ಬಿಜೆಪಿಯ ಗೆಲುವಿನ ಅಂತರಕ್ಕಿಂತ ಫಾರ್ಮ್-7 ಮೂಲಕ ಡಿಲೀಟ್ ಮಾಡಲಾದ ಮತಗಳ ಸಂಖ್ಯೆಯೇ ಹೆಚ್ಚಾಗಿದೆ.

ಚುನಾವಣಾ ಆಯೋಗದ ನಿಯಮಗಳ ಪ್ರಕಾರ, ದಿನಕ್ಕೆ ಒಬ್ಬ ಬಿಎಲ್‌ಎ ಗರಿಷ್ಠ 10 ಮತ್ತು ಇಡೀ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಕೇವಲ 30 ಆಕ್ಷೇಪಣೆ ಸಲ್ಲಿಸಲು ಅವಕಾಶವಿದೆ. ಆದರೆ, ಬಿಜೆಪಿ ಕಾರ್ಯಕರ್ತರು ನಕಲಿ ಸಹಿ, ನಕಲಿ ದಾಖಲೆ ಸೃಷ್ಟಿಸಿ ದಿನಕ್ಕೆ 400-500 ಅರ್ಜಿಗಳನ್ನು ರಾಶಿಯಾಗಿ ಸಲ್ಲಿಸಿದ್ದಾರೆ. ವಿಜಯಪುರದ ಬಬಲೇಶ್ವರ ಕ್ಷೇತ್ರದಲ್ಲಿ ಎಸ್‌ಐಆರ್ ನೋಟಿಸ್‌ಗಳ ಹಿಯರಿಂಗ್ ಮುಗಿಯುವ ಕೊನೆ 2 ದಿನಗಳಲ್ಲಿ ಕೇವಲ 7 ಜನರು 1,564 ಅರ್ಜಿಗಳನ್ನು (ಹೆಚ್ಚಾಗಿ ಮುಸ್ಲಿಂ ಮತದಾರರ ವಿರುದ್ಧ) ಸಲ್ಲಿಸಿದ್ದಾರೆ! ಅಂತೆಯೇ, ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆಯಲ್ಲಿ ಬೂತ್ ಮಟ್ಟದ ಬಿಜೆಪಿ ಅಧ್ಯಕ್ಷನ ಹೆಸರಿನಲ್ಲಿ ನಕಲಿ ಸಹಿ ಹಾಕಿ ಅರ್ಜಿಗಳನ್ನು ಸಲ್ಲಿಸಲಾಗಿದೆ.

ಜನಪ್ರತಿನಿಧಿ ಕಾಯ್ದೆಯ ಪ್ರಕಾರ, ನಿಯಮಗಳನ್ನು ಉಲ್ಲಂಘಿಸಿ ನಕಲಿ ಅರ್ಜಿಗಳನ್ನು ಸಲ್ಲಿಸಿದರೆ, ಒಬ್ಬರೇ ವ್ಯಕ್ತಿ ನೂರಾರು ಆಕ್ಷೇಪಣೆಗಳನ್ನು ಸಲ್ಲಿಸಿದ್ದಾರೆ. ಅಂತಹವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲು ಚುನಾವಣಾ ಆಯೋಗಕ್ಕೆ ಅವಕಾಶವಿದೆ. ಆದರೂ, ಗ್ಯಾನೇಶ್ ಕುಮಾರ್ ಯಾವುದೇ ಕ್ರಮ ಕೈಗೊಳ್ಳದೆ, ನಕಲಿ ಅರ್ಜಿಗಳನ್ನೇ ಪರಿಗಣಿಸಿ, ಮತದಾರರಿಗೆ ತೊಂದರೆ/ಕಿರುಕುಳ ನೀಡಿದ್ದಾರೆ. ನಕಲಿ ಅರ್ಜಿಗಳನ್ನು ಸಲ್ಲಿಸಿರುವ ಬಿಜೆಪಿ ಕಾರ್ಯಕರ್ತರ ರಕ್ಷಣೆಗೆ ನಿಂತಿದ್ದಾರೆ.

ಚುನಾವಣಾ ಆಯೋಗವು ಯಾವುದೇ ರಾಜಕೀಯ ಪಕ್ಷದ ಐಟಿ ಸೆಲ್ ಅಲ್ಲ; ಅದು ಭಾರತೀಯರ ಸಂವಿಧಾನಬದ್ಧ ಹಕ್ಕಿನ ರಕ್ಷಕ. ತಮ್ಮ ಇಬ್ಬರು ಸಹೋದ್ಯೋಗಿಗಳ ವಿಶ್ವಾಸವನ್ನೇ ಕಳೆದುಕೊಂಡು, ನ್ಯಾಯಾಂಗದ ಕಟ್ಟಳೆಗಳನ್ನೇ ಗಾಳಿಗೆ ತೂರಿ, ದೇಶದ ಕೋಟ್ಯಂತರ ಪ್ರಜೆಗಳನ್ನು ಮತಹೀನರನ್ನಾಗಿ ಮಾಡಿ ದೇಶದ್ರೋಹ ಎಸಗಿರುವ ಗ್ಯಾನೇಶ್ ಕುಮಾರ್ ಅವರ ಮೇಲೆ ತಕ್ಷಣವೇ ತನಿಖೆಯಾಗಬೇಕು.

ಮೋದಿ-ಅಮಿತ್ ಶಾರ ಅಧಿಕಾರದಾಹಕ್ಕೆ ಇಡೀ ಚುನಾವಣಾ ಆಯೋಗವನ್ನೇ ಬಲಿಪಶು ಮಾಡಿ, ದೇಶದ 96 ಕೋಟಿ ಮತದಾರರ ಭವಿಷ್ಯವನ್ನು ಅಪಾಯಕ್ಕೆ ತಳ್ಳಿರುವ ಈ ಗ್ಯಾನೇಶ್ ಕುಮಾರ್ ಎಂಬ ಮಹಾಶಯ ಒಂದು ಕ್ಷಣವೂ ಆ ಹುದ್ದೆಯಲ್ಲಿ ಮುಂದುವರಿಯಲು ಅರ್ಹರಲ್ಲ. ಸಂಸತ್ತು ಮತ್ತು ನ್ಯಾಯಾಂಗ ತಕ್ಷಣವೇ ಮಧ್ಯಪ್ರವೇಶಿಸಿ ಈ ಪ್ರಜಾಪ್ರಭುತ್ವದ ಕೊಲೆಗಡುಕನನ್ನು ಹುದ್ದೆಯಿಂದ ವಜಾಗೊಳಿಸಬೇಕು. ಗ್ಯಾನೇಶ್ ಕುಮಾರ್ ಮೇಲಿನ ಅಕ್ರಮಗಳ ತನಿಖೆಗೆ ಸ್ವತಂತ್ರ ನ್ಯಾಯಾಂಗ ಆಯೋಗ ರಚನೆಯಾಗಬೇಕು. ಇಲ್ಲವಾದಲ್ಲಿ, ಭಾರತೀಯ ಪ್ರಜೆಗಳು ಬೀದಿಗಿಳಿದು ಈ ವೋಟ್ ಚೋರಿ ಸರ್ಕಾರದ ವಿರುದ್ಧ ದಂಗೆ ಏಳುವುದು ಅನಿವಾರ್ಯವಾಗಲಿದೆ!

ಚುನಾವಣಾ ಆಯುಕ್ತರ ನೇಮಕ, ವಜಾ ಹೇಗೆ? ಈ ಹಿಂದೆ 'ಮಹಾಭಿಯೋಗ' ನಡೆದಿದೆಯೇ?

ಚುನಾವಣೆಯನ್ನು ನ್ಯಾಯಸಮ್ಮತವಾಗಿ ನಡೆಸಬೇಕಾದ ಚುನಾವಣಾ ಆಯೋಗ, ಚುನಾವಣಾ ಆಯುಕ್ತರು ಸರ್ಕಾರದ ಪ್ರಭಾವದಿಂದ ಮುಕ್ತವಾಗಿರಬೇಕು. ಆದರೆ ಚುನಾವಣೆ ಸ್ಪರ್ಧಿಸುವ ಆಡಳಿತ ಪಕ್ಷವೇ ತನಗೆ ಇಷ್ಟವಾದ ವ್ಯಕ್ತಿಯನ್ನು ಚುನಾವಣಾ ಅಧಿಕಾರಿಯಾಗಿ ನೇಮಕ ಮಾಡಿಕೊಂಡರೆ, ವಿರೋಧ ಪಕ್ಷಗಳಿಗೆ ನ್ಯಾಯ ಸಿಗುವುದು ಹೇಗೆ?

ಯಾವುದೇ ದೇಶದಲ್ಲಿ ಚುನಾವಣಾ ಪ್ರಕ್ರಿಯೆ ಪ್ರಜಾಪ್ರಭುತ್ವದ ಜೀವನಾಡಿ. ಅದರಲ್ಲೂ ಭಾರತದಂತಹ ಬೃಹತ್ ಮತ್ತು ವೈವಿಧ್ಯಮಯ ದೇಶದಲ್ಲಿ ಚುನಾವಣಾ ಪ್ರಕ್ರಿಯೆ ಅತಿ ಮುಖ್ಯವಾಗಿದೆ. ಈ ಜವಾಬ್ದಾರಿಯನ್ನು ನಿರ್ವಹಿಸುವ ಸಂಸ್ಥೆಯೇ ಭಾರತೀಯ ಚುನಾವಣಾ ಆಯೋಗ ( ). ಸಂವಿಧಾನದ ವಿಧಿ 324ರ ಅಡಿಯಲ್ಲಿ ಸ್ವತಂತ್ರ ಹಾಗೂ ನಿಷ್ಪಕ್ಷಪಾತವಾಗಿ ದೇಶದ ಸಂಸತ್ತು, ರಾಜ್ಯ ಶಾಸನಸಭೆಗಳು ಹಾಗೂ ರಾಷ್ಟ್ರಪತಿ, ಉಪರಾಷ್ಟ್ರಪತಿ ಹುದ್ದೆಗಳಿಗೆ ಚುನಾವಣೆ ನಡೆಸುವುದು ಆಯೋಗದ ಮುಖ್ಯ ಕರ್ತವ್ಯವಾಗಿದೆ. ಈ ಸಂಸ್ಥೆಯ ಸುಗಮ ಕಾರ್ಯನಿರ್ವಹಣೆಗೆ ಅದರ ಮುಖ್ಯ ಚುನಾವಣಾ ಆಯುಕ್ತರು (ಸಿಇಸಿ) ಮತ್ತು ಇತರ ಚುನಾವಣಾ ಆಯುಕ್ತರು () ಅತ್ಯಂತ ಮುಖ್ಯ ಪಾತ್ರ ವಹಿಸುತ್ತಾರೆ.

ಆದರೆ ಇತ್ತೀಚಿನ ದಿನಗಳಲ್ಲಿ ಚುನಾವಣಾ ಆಯೋಗದ ನಿರ್ಧಾರಗಳು, ಮತದಾನದ ಪ್ರಮಾಣ ಹಾಗೂ ಚುನಾವಣಾ ಅಕ್ರಮಗಳು ಒಂದಾದ ಮೇಲೆ ಒಂದು ಬಹಿರಂಗವಾಗುತ್ತಿದೆ. ಈ ವಿಚಾರವು ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿವೆ. ಆಯೋಗವು ಸರ್ಕಾರದ ಪ್ರಭಾವಕ್ಕೆ ಒಳಗಾಗುತ್ತಿದೆ ಎಂಬ ಆರೋಪಗಳು ಮತ್ತು ಮುಖ್ಯ ಚುನಾವಣಾ ಆಯುಕ್ತರನ್ನು ಹುದ್ದೆಯಿಂದ ತೆಗೆದುಹಾಕಬೇಕೆಂಬ (ಮಹಾಭಿಯೋಗ) ಆಗ್ರಹಗಳು ಕೇಳಿಬರುತ್ತಿವೆ. ಈ ಮಹಾಭಿಯೋಗ ಪ್ರಕ್ರಿಯೆ ಹೇಗೆ ನಡೆಯುತ್ತದೆ, ಈ ಆಗ್ರಹ ಯಾಕೆ ಕೇಳಿಬಂದಿದೆ ಎಂಬುದನ್ನು ತಿಳಿಯುವುದಕ್ಕೂ ಮುನ್ನ ಚುನಾವಣಾ ಆಯುಕ್ತರ ನೇಮಕಾತಿ, ಪ್ರಸ್ತುತ ಎದುರಾಗಿರುವ ಪ್ರಮುಖ ಸಂಶಯಗಳ ಬಗ್ಗೆ ತಿಳಿಯುವುದು ಮುಖ್ಯ.

ಈ ಹಿಂದೆ ಚುನಾವಣಾ ಆಯುಕ್ತರನ್ನು ಹೇಗೆ ನೇಮಿಸಲಾಗುತ್ತಿತ್ತು?

2023ಕ್ಕಿಂತ ಮೊದಲು ಚುನಾವಣಾ ಆಯುಕ್ತರ ನೇಮಕಾತಿಗೆ ಸಂಬಂಧಿಸಿದಂತೆ ಸಂಸತ್ತು ಪ್ರತ್ಯೇಕವಾದ, ಸುಸ್ಪಷ್ಟ ಶಾಸನಬದ್ಧ ನಿಯಮಾವಳಿಯನ್ನು ರೂಪಿಸಿರಲಿಲ್ಲ. ಸಂವಿಧಾನದ 324(2) ನೇ ವಿಧಿಯ ಪ್ರಕಾರ, ''ಸಂಸತ್ತು ಈ ಕುರಿತು ಕಾನೂನು ರೂಪಿಸುವವರೆಗೆ ರಾಷ್ಟ್ರಪತಿಗಳು ಚುನಾವಣಾ ಆಯುಕ್ತರನ್ನು ನೇಮಕ ಮಾಡುತ್ತಾರೆ'' ಎಂದು ಹೇಳಲಾಗಿತ್ತು. ಯಾವುದೇ ಪ್ರತ್ಯೇಕ ಕಾಯ್ದೆ ಇಲ್ಲದ ಕಾರಣ, ಪ್ರಧಾನಮಂತ್ರಿಗಳು ಮತ್ತು ಅವರ ಸಂಪುಟದ ಶಿಫಾರಸಿನ ಮೇರೆಗೆ ರಾಷ್ಟ್ರಪತಿಗಳು ನೇರವಾಗಿ ಮುಖ್ಯ ಚುನಾವಣಾ ಆಯುಕ್ತರು ಹಾಗೂ ಇತರ ಆಯುಕ್ತರನ್ನು ನೇಮಕ ಮಾಡುತ್ತಿದ್ದರು. ಈ ವ್ಯವಸ್ಥೆಯಲ್ಲಿ ಆಡಳಿತಾರೂಢ ಸರ್ಕಾರವೇ ತನಗೆ ಅನುಕೂಲಕರವಾದ ಅಥವಾ ನಿವೃತ್ತ ಐಎಎಸ್ ಅಧಿಕಾರಿಗಳನ್ನು ಆಯ್ಕೆ ಮಾಡುತ್ತಿದೆ ಎಂಬ ಆರೋಪಗಳು ನಿರಂತರವಾಗಿ ಕೇಳಿಬರುತ್ತಿದ್ದವು.

2023ರ ಮಾರ್ಚ್‌ನಲ್ಲಿ ಸುಪ್ರೀಂ ಕೋರ್ಟ್ ತನ್ನ ಐತಿಹಾಸಿಕ ತೀರ್ಪಿನಲ್ಲಿ (.), ಸಂಸತ್ತು ಕಾನೂನು ರೂಪಿಸುವವರೆಗೆ ಚುನಾವಣಾ ಆಯುಕ್ತರ ಆಯ್ಕೆ ಸಮಿತಿಯಲ್ಲಿ ಪ್ರಧಾನಮಂತ್ರಿ, ಲೋಕಸಭೆಯ ವಿರೋಧ ಪಕ್ಷದ ನಾಯಕ ಹಾಗೂ ಭಾರತದ ಮುಖ್ಯ ನ್ಯಾಯಮೂರ್ತಿಗಳು (ಸಿಜೆಐ) ಇರಬೇಕೆಂದು ಆದೇಶಿಸಿತ್ತು. ಆದರೆ, ಕೇಂದ್ರ ಸರ್ಕಾರವು 2023ರ ಕೊನೆಯಲ್ಲಿ ''ಮುಖ್ಯ ಚುನಾವಣಾ ಆಯುಕ್ತ ಮತ್ತು ಇತರ ಚುನಾವಣಾ ಆಯುಕ್ತರ (ಸೇವಾ ಷರತ್ತುಗಳು ಮತ್ತು ಅಧಿಕಾರದ ಅವಧಿ) ಕಾಯ್ದೆ, 2023'' ಅನ್ನು ಜಾರಿಗೆ ತಂದಿತು.

ಮೊದಲು ಇಬ್ಬರು ಕೇಂದ್ರ ಸರ್ಕಾರದ ಕಾರ್ಯದರ್ಶಿ ಮಟ್ಟದ ಅಧಿಕಾರಿಗಳನ್ನು ಒಳಗೊಂಡ ಕೇಂದ್ರ ಕಾನೂನು ಸಚಿವರ ನೇತೃತ್ವದ ಪರಿಶೋಧನಾ ಸಮಿತಿಯು 5 ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ತಯಾರಿಸಿ ಆಯ್ಕೆ ಸಮಿತಿಗೆ ನೀಡುತ್ತದೆ. ಅಂತಿಮವಾಗಿ ಪ್ರಧಾನಮಂತ್ರಿಗಳು (ಸಮಿತಿಯ ಅಧ್ಯಕ್ಷರು), ಲೋಕಸಭೆಯ ವಿರೋಧ ಪಕ್ಷದ ನಾಯಕ (ಅಥವಾ ಅತಿ ದೊಡ್ಡ ವಿರೋಧ ಪಕ್ಷದ ನಾಯಕ), ಪ್ರಧಾನಿಯವರಿಂದ ನಾಮನಿರ್ದೇಶನಗೊಂಡ ಒಬ್ಬ ಕೇಂದ್ರ ಸಂಪುಟ ಸಚಿವರ ಸಮಿತಿಯು ಆಯುಕ್ತರ ಹೆಸರುಗಳನ್ನು ರಾಷ್ಟ್ರಪತಿಗಳಿಗೆ ಶಿಫಾರಸು ಮಾಡಲಿದ್ದಾರೆ. ಈ ಸಮಿತಿಯು ಬಹುಮತದ ಆಧಾರದ ಮೇಲೆ ನೀಡುವ ಶಿಫಾರಸಿನಂತೆ ರಾಷ್ಟ್ರಪತಿಯವರು ಆಯುಕ್ತರನ್ನು ನೇಮಕ ಮಾಡುತ್ತಾರೆ.



ಹೊಸ ಕಾಯ್ದೆಯಲ್ಲಿ ಕಂಡುಬರುವ ಅತ್ಯಂತ ಪ್ರಮುಖ ಲೋಪವೆಂದರೆ ಆಯ್ಕೆ ಸಮಿತಿಯ ಸ್ವರೂಪ ಮತ್ತು ಬಹುಮತದ ಸಂಖ್ಯಾಬಲ. ಸುಪ್ರೀಂ ಕೋರ್ಟ್ ತನ್ನ ಆದೇಶದಲ್ಲಿ ತಟಸ್ಥ ಧ್ವನಿಯಾಗಿ ಭಾರತದ ಮುಖ್ಯ ನ್ಯಾಯಮೂರ್ತಿಗಳನ್ನು (ಸಿಜೆಐ) ಸೇರಿಸಿತ್ತು. ಆದರೆ ಹೊಸ ಕಾಯ್ದೆಯಲ್ಲಿ ಮುಖ್ಯ ನ್ಯಾಯಮೂರ್ತಿಗಳನ್ನು ಹೊರಗಿಡಲಾಗಿದೆ. ತ್ರಿ-ಸದಸ್ಯ ಸಮಿತಿಯಲ್ಲಿ ಪ್ರಧಾನಮಂತ್ರಿ ಹಾಗೂ ಅವರು ನಾಮನಿರ್ದೇಶನ ಮಾಡುವ ಕೇಂದ್ರ ಸಚಿವರು ಇರುವುದರಿಂದ, ಮೂವರಲ್ಲಿ ಇಬ್ಬರು ಸರ್ಕಾರದ ಪ್ರತಿನಿಧಿಗಳೇ ಆಗಿರುತ್ತಾರೆ (2:1 ಪ್ರಮಾಣ). ವಿರೋಧ ಪಕ್ಷದ ನಾಯಕರು ಆಕ್ಷೇಪ ವ್ಯಕ್ತಪಡಿಸಿದರೂ ಅಥವಾ ಭಿನ್ನಾಭಿಪ್ರಾಯ ಸೂಚಿಸಿದರೂ, ಸರ್ಕಾರವು ತನಗೆ ಬೇಕಾದ ಅಭ್ಯರ್ಥಿಯನ್ನು ಬಹುಮತದ (2-1) ಆಧಾರದಲ್ಲಿ ಸುಲಭವಾಗಿ ಆಯ್ಕೆ ಮಾಡಲು ಈ ನಿಯಮ ಅವಕಾಶ ಮಾಡಿಕೊಡುತ್ತದೆ.

ಚುನಾವಣೆಯನ್ನು ನ್ಯಾಯಸಮ್ಮತವಾಗಿ ನಡೆಸಬೇಕಾದ ಚುನಾವಣಾ ಆಯೋಗ, ಚುನಾವಣಾ ಆಯುಕ್ತರು ಸರ್ಕಾರದ ಪ್ರಭಾವದಿಂದ ಮುಕ್ತವಾಗಿರಬೇಕು. ಆದರೆ ಚುನಾವಣೆ ಸ್ಪರ್ಧಿಸುವ ಆಡಳಿತ ಪಕ್ಷವೇ ತನಗೆ ಇಷ್ಟವಾದ ವ್ಯಕ್ತಿಯನ್ನು ಚುನಾವಣಾ ಅಧಿಕಾರಿಯಾಗಿ ನೇಮಕ ಮಾಡಿಕೊಂಡರೆ, ವಿರೋಧ ಪಕ್ಷಗಳಿಗೆ ನ್ಯಾಯ ಸಿಗುವುದು ಹೇಗೆ? ಆಯ್ಕೆ ಸಮಿತಿಯಲ್ಲಿ ಸರ್ಕಾರಕ್ಕೇ ಅಂತಿಮ ನಿರ್ಧಾರ ತೆಗೆದುಕೊಳ್ಳುವ ಬಹುಮತ ನೀಡಿರುವುದರಿಂದ ಆಯೋಗವು ಸರ್ಕಾರದ ಅಧೀನ ಸಂಸ್ಥೆಯಂತೆ ಬದಲಾಗುವ ಅಪಾಯವಿದೆ. ಇದೀಗ ಅದೇ ಅಪಾಯ ಬಹಿರಂಗವಾಗಿದೆ.

ದೇಶದ ಮುಖ್ಯ ಚುನಾವಣಾ ಆಯುಕ್ತರಾದ (ಸಿಇಸಿ) ಗ್ಯಾನೇಶ್ ಕುಮಾರ್ ಅವರ ವಿರುದ್ಧ ಇತ್ತೀಚೆಗೆ ಗಂಭೀರ ಆರೋಪಗಳು ಕೇಳಿಬಂದಿದೆ. ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಗೆ ಸಂಬಂಧಿಸಿದಂತೆ ಇಬ್ಬರು ಚುನಾವಣಾ ಆಯುಕ್ತರಾದ ಸುಖ್‌ಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರು ಕಳೆದ 10 ತಿಂಗಳುಗಳಲ್ಲಿ ಕನಿಷ್ಠ 14 ಬಾರಿ ಅಧಿಕೃತವಾಗಿ ಲಿಖಿತ ಆಕ್ಷೇಪಣೆಗಳನ್ನು ದಾಖಲಿಸಿದ್ದಾರೆ. ಪೂರ್ಣ ಆಯೋಗದ ಒಮ್ಮತದ ಅನುಮೋದನೆಯಿಲ್ಲದೆ ಕಾನೂನುಬಾಹಿರವಾಗಿ ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ ಎಂಬ ಮಾಹಿತಿ ಬಹಿರಂಗವಾಗಿದೆ. ಇದೀಗ ಮಹಾಭಿಯೋಗ ನಡೆಸಿ ಮುಖ್ಯ ಚುನಾವಣಾ ಆಯುಕ್ತರನ್ನು ವಜಾಗೊಳಿಸಬೇಕು ಎಂಬ ಆಗ್ರಹ ಕೇಳಿಬಂದಿದೆ.

ಮುಖ್ಯ ಚುನಾವಣಾ ಆಯುಕ್ತರ ವಜಾ ಹೇಗೆ ನಡೆಯುತ್ತದೆ?

ಚುನಾವಣಾ ಆಯೋಗವು ಸರ್ಕಾರದಿಂದ ಸ್ವತಂತ್ರವಾಗಿ ಕಾರ್ಯನಿರ್ವಹಿಸಲು, ಮುಖ್ಯ ಚುನಾವಣಾ ಆಯುಕ್ತರಿಗೆ (ಸಿಇಸಿ) ಸಂವಿಧಾನವು ವಿಶೇಷ ರಕ್ಷಣೆ ನೀಡಿದೆ. ದೇಶದ ಸುಪ್ರೀಂ ಕೋರ್ಟ್ ನ್ಯಾಯಾಧೀಶರನ್ನು ಯಾವ ಆಧಾರ ಮತ್ತು ವಿಧಾನದಲ್ಲಿ ಹುದ್ದೆಯಿಂದ ವಜಾಗೊಳಿಸಬಹುದೋ, ಅದೇ ರೀತಿ ಮಾತ್ರ ಸಿಇಸಿಯವರನ್ನೂ ತೆಗೆದುಹಾಕಬಹುದು. ಸಾಮಾನ್ಯವಾಗಿ ಇದನ್ನು ಇಂಪೀಚ್‌ಮೆಂಟ್ (ಮಹಾಭಿಯೋಗ) ಎಂದು ಕರೆಯಲಾಗುತ್ತದೆಯಾದರೂ, ಸಂವಿಧಾನದಲ್ಲಿ (ಹುದ್ದೆಯಿಂದ ವಜಾ) ಎಂಬ ಪದವನ್ನು ಬಳಸಲಾಗಿದೆ.

ಮುಖ್ಯ ಚುನಾವಣಾ ಆಯುಕ್ತರು ದುರ್ನಡತೆ ಹೊಂದಿದ್ದರೆ ಅಥವಾ ಅಸಾಮರ್ಥ್ಯ ಹೊಂದಿರುವವರು ಎಂಬುದು ಸಾಬೀತಾದರೆ ಲೋಕಸಭೆಯಲ್ಲಿ ಕನಿಷ್ಠ 100 ಸದಸ್ಯರು ಅಥವಾ ರಾಜ್ಯಸಭೆಯಲ್ಲಿ 50 ಸದಸ್ಯರು ನೋಟಿಸ್ ನೀಡಬೇಕು. ಸ್ಪೀಕರ್ ಅಥವಾ ಸಭಾಪತಿಯವರು ಪ್ರಕರಣದ ವಿಚಾರಣೆಗೆ ಮೂವರು ಸದಸ್ಯರ ಸಮಿತಿ ರಚಿಸುತ್ತಾರೆ. ಆರೋಪ ಸಾಬೀತಾದರೆ, ಸಂಸತ್ತಿನ ಉಭಯ ಸದನಗಳಲ್ಲಿ (ಲೋಕಸಭೆ ಮತ್ತು ರಾಜ್ಯಸಭೆ) ಪ್ರತ್ಯೇಕವಾಗಿ, ಹಾಜರಿದ್ದು ಮತ ಚಲಾಯಿಸುವ 2/3 ಭಾಗದಷ್ಟು ಬಹುಮತದೊಂದಿಗೆ ನಿರ್ಣಯ ಅಂಗೀಕಾರವಾಗಬೇಕು. ಅಂತಿಮವಾಗಿ ರಾಷ್ಟ್ರಪತಿಗಳ ಆದೇಶದ ಮೂಲಕ ಸಿಇಸಿಯವರನ್ನು ಹುದ್ದೆಯಿಂದ ತೆರವುಗೊಳಿಸಲಾಗುತ್ತದೆ. ಇತರ ಚುನಾವಣಾ ಆಯುಕ್ತರನ್ನು ಸಿಇಸಿಯವರ ಶಿಫಾರಸಿನ ಮೇರೆಗೆ ರಾಷ್ಟ್ರಪತಿಯವರು ವಜಾಗೊಳಿಸಬಹುದು.

ಈವರೆಗೆ ದೇಶದಲ್ಲಿ ಸಿಇಸಿಯ ಮಹಾಭಿಯೋಗ ಜರುಗಿದೆಯೇ?

ದೇಶದ ಪ್ರಜಾಪ್ರಭುತ್ವದ ಇತಿಹಾಸದಲ್ಲಿ ಈವರೆಗೆ ಯಾವೊಬ್ಬ ಮುಖ್ಯ ಚುನಾವಣಾ ಆಯುಕ್ತರನ್ನೂ (ಸಿಇಸಿ) ಮಹಾಭಿಯೋಗ ಅಥವಾ ಸಂಸದೀಯ ಪ್ರಕ್ರಿಯೆಯ ಮೂಲಕ ಹುದ್ದೆಯಿಂದ ವಜಾಗೊಳಿಸಲಾಗಿಲ್ಲ. ಹಿಂದೆ ಟಿ.ಎನ್. ಶೇಷನ್ ಅವರಂತಹ ಆಯುಕ್ತರಿದ್ದಾಗ ರಾಜಕೀಯ ವಲಯದಲ್ಲಿ ಭಿನ್ನಾಭಿಪ್ರಾಯಗಳು ಮೂಡಿದರೂ ಪ್ರಕ್ರಿಯೆ ಜರುಗಿರಲಿಲ್ಲ. ಹಾಗೆಯೇ, 2009ರಲ್ಲಿ ಸಿಇಸಿ ಎನ್. ಗೋಪಾಲಸ್ವಾಮಿ ಅವರು ಸಹ-ಆಯುಕ್ತ ನವೀನ್ ಚಾವ್ಲಾರನ್ನು ವಜಾಗೊಳಿಸಲು ನೀಡಿದ್ದ ಶಿಫಾರಸನ್ನು ಅಂದಿನ ಸರ್ಕಾರ ತಿರಸ್ಕರಿಸಿತ್ತು. ಹೀಗಾಗಿ ಸಂಸತ್ತಿನಲ್ಲಿ ಮತದಾನದ ಹಂತಕ್ಕೆ ತಲುಪಿ ವಜಾಗೊಂಡ ಉದಾಹರಣೆ ಭಾರತದಲ್ಲಿಲ್ಲ.

ಹೀಗೆ ಚುನಾವಣಾ ಆಯೋಗವು ಪ್ರಜಾಪ್ರಭುತ್ವದ ಅಡಿಪಾಯವನ್ನು ಕಾಯುವ ಪವಿತ್ರ ಸಂಸ್ಥೆ. ಸಾರ್ವಜನಿಕರು ಮತ್ತು ರಾಜಕೀಯ ಪಕ್ಷಗಳಿಗೆ ಆಯೋಗದ ಮೇಲಿರುವ ನಂಬಿಕೆಯೇ ಪ್ರಜಾಪ್ರಭುತ್ವದ ಯಶಸ್ಸಿನ ಗುಟ್ಟು. ಆದರೆ, ಇತ್ತೀಚಿನ ವರ್ಷಗಳಲ್ಲಿ ನೇಮಕಾತಿ ಪ್ರಕ್ರಿಯೆಯಲ್ಲಿ ಸರ್ಕಾರದ ಅತಿಯಾದ ಪ್ರಭಾವ ಮತ್ತು ಆಯೋಗದ ನಿರ್ಧಾರಗಳ ಪಾರದರ್ಶಕತೆಯ ಮೇಲಿನ ಪ್ರಶ್ನೆಗಳು ಸಾರ್ವಜನಿಕ ನಂಬಿಕೆಗೆ ಧಕ್ಕೆ ತರುತ್ತಿರುವುದು ಕಳವಳಕಾರಿ.

ಆದ್ದರಿಂದ, ಸಿಇಸಿಯವರ ವಜಾಗೆ ಅಥವಾ ಇಂಪೀಚ್‌ಮೆಂಟ್‌ಗೆ ಆಗ್ರಹಿಸುವುದು ಬರೀ ರಾಜಕೀಯ ತಂತ್ರವಲ್ಲ, ಆಯೋಗದಲ್ಲಿ ಸುಧಾರಣೆ ತರುವ ನಿಟ್ಟಿನಲ್ಲಿ ಗಂಭೀರ ಹೆಜ್ಜೆ. ಸಂಸತ್ತು ಮತ್ತು ನ್ಯಾಯಾಂಗವು ಚುನಾವಣಾ ಆಯೋಗದ ಸಂಪೂರ್ಣ ಸ್ವಾಯತ್ತತೆಯನ್ನು ಎತ್ತಿಹಿಡಿಯುವಂತೆ ನೋಡಿಕೊಳ್ಳುವುದು, ಮತದಾನ ಪ್ರಕ್ರಿಯೆಯಲ್ಲಿ ಶೇ. 100ರಷ್ಟು ಪಾರದರ್ಶಕತೆ ಕಾಯ್ದುಕೊಳ್ಳುವುದು ಮತ್ತು ಸಾರ್ವಜನಿಕ ಅನುಮಾನಗಳನ್ನು ತಕ್ಷಣವೇ ಪರಿಹರಿಸುವುದು ಇಂದಿನ ತುರ್ತು ಅಗತ್ಯ. ಈ ಮೂಲಕ ಮಾತ್ರ ದೇಶದ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಅಖಂಡವಾಗಿ ಉಳಿಸಿಕೊಳ್ಳಲು ಸಾಧ್ಯ.

ಬೆಳಗಾವಿ 200 ಪ್ಲೇಟ್‌ಗೆ ಸೀಮಿತವಾದ ಇಂದಿರಾ ಕ್ಯಾಂಟಿನ್: 500ಕ್ಕೆ ಹೆಚ್ಚಿಸಲು ಆಗ್ರಹ

ಬೆಳಗಾವಿ ಜಿಲ್ಲೆಯ ಯರಗಟ್ಟಿ ಪಟ್ಟಣದಲ್ಲಿ ಬಡವರು, ಕೂಲಿ ಕಾರ್ಮಿಕರು, ಕಾಲೇಜು ವಿದ್ಯಾರ್ಥಿಗಳು ಮತ್ತು ಪ್ರಯಾಣಿಕರಿಗೆ ₹5ಕ್ಕೆ ಉಪಹಾರ, ₹10ಕ್ಕೆ ಊಟ ನೀಡುವ ಇಂದಿರಾ ಕ್ಯಾಂಟಿನ್ ಯೋಜನೆ ಜನಸಾಮಾನ್ಯರಿಗೆ ಬಹುದೊಡ್ಡ ಆಸರೆಯಾಗಿದೆ. ಆದರೆ ಬೇಡಿಕೆ ಹೆಚ್ಚಾಗಿದ್ದರೂ ಊಟ-ಉಪಹಾರದ ಪ್ಲೇಟ್‌ಗಳ ಸಂಖ್ಯೆ ಮಾತ್ರ 200ಕ್ಕೆ ಸೀಮಿತವಾಗಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ.

ಯರಗಟ್ಟಿ ತಾಲೂಕು ಕೇಂದ್ರವಾಗಿದ್ದು, ಪ್ರತಿದಿನ ಸುತ್ತಮುತ್ತಲಿನ ಗ್ರಾಮಗಳಿಂದ ನೂರಾರು ವಿದ್ಯಾರ್ಥಿಗಳು, ಕಾರ್ಮಿಕರು ಹಾಗೂ ಸಾರ್ವಜನಿಕರು ಪಟ್ಟಣಕ್ಕೆ ಆಗಮಿಸುತ್ತಾರೆ. ಅದರಲ್ಲೂ ಬಸ್ ನಿಲ್ದಾಣದಲ್ಲಿಯೇ ಇಂದಿರಾ ಕ್ಯಾಂಟಿನ್ ಇರುವುದರಿಂದ ಪ್ರಯಾಣಿಕರಿಗೂ ಅನುಕೂಲವಾಗಿದೆ. ಆದರೆ ಪ್ರತಿದಿನ ಹೆಚ್ಚಿನ ಸಂಖ್ಯೆಯಲ್ಲಿ ಜನರು ಕ್ಯಾಂಟಿನ್‌ಗೆ ಬರುತ್ತಿರುವುದರಿಂದ 200 ಪ್ಲೇಟ್ ಊಟ ಮತ್ತು ಉಪಹಾರ ಯಾವುದಕ್ಕೂ ಸಾಲುತ್ತಿಲ್ಲ ಎಂಬ ದೂರು ಕೇಳಿಬರುತ್ತಿದೆ.

ಕಡಿಮೆ ದರದಲ್ಲಿ ಆಹಾರ ಸಿಗುತ್ತದೆ ಎಂಬ ಕಾರಣಕ್ಕೆ ವಿದ್ಯಾರ್ಥಿಗಳು ಹಾಗೂ ಕಾರ್ಮಿಕರು ಇಂದಿರಾ ಕ್ಯಾಂಟಿನ್‌ಗೆ ಅವಲಂಬಿತರಾಗಿದ್ದಾರೆ. ಆದರೆ ಕೆಲವರು ತಡವಾಗಿ ಬಂದರೆ ಉಪಹಾರ ಅಥವಾ ಊಟ ಖಾಲಿಯಾಗಿರುತ್ತದೆ. ಹಣ ಕೊಟ್ಟು ಊಟ ಪಡೆಯುವ ವ್ಯವಸ್ಥೆ ಇದ್ದರೂ ಆಹಾರ ಸಿಗದೆ ವಾಪಸ್ ತೆರಳುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಎಂದು ಸಾರ್ವಜನಿಕರು ಅಳಲು ತೋಡಿಕೊಂಡಿದ್ದಾರೆ.

ಕಾಲೇಜು ವಿದ್ಯಾರ್ಥಿಗಳು ಈ ದಿನ.ಕಾಮ್ ಜತೆ ಮಾತನಾಡಿ, ''ನಾವು ಪ್ರತಿದಿನ ಯರಗಟ್ಟಿಗೆ ಕಾಲೇಜಿಗೆ ಬರುತ್ತೇವೆ. ಕಡಿಮೆ ದರದಲ್ಲಿ ಊಟ-ಉಪಹಾರ ಸಿಗುತ್ತಿರುವುದು ನಮಗೆ ತುಂಬಾ ಅನುಕೂಲ. ಆದರೆ ಕೆಲವೊಮ್ಮೆ ಬರುವಷ್ಟರಲ್ಲಿ ಊಟ ಅಥವಾ ಉಪಹಾರ ಮುಗಿದಿರುತ್ತದೆ. ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಪ್ಲೇಟ್‌ಗಳ ಸಂಖ್ಯೆಯನ್ನು ಹೆಚ್ಚಿಸಬೇಕು'' ಎಂದು ಆಗ್ರಹಿಸಿದರು.

ಕೂಲಿ ಕಾರ್ಮಿಕರಿಗೂ ಸಮಸ್ಯೆ

ಕೂಲಿ ಕಾರ್ಮಿಕ ದುರ್ಗಪ್ಪ ಅವರು ಈ ದಿನ.ಕಾಮ್ ಜತೆ ಮಾತನಾಡಿ, ''ನಾವು ದಿನಗೂಲಿ ಕೆಲಸ ಮಾಡುತ್ತೇವೆ. ಊಟಕ್ಕಾಗಿ ಇಂದಿರಾ ಕ್ಯಾಂಟಿನ್‌ಗೆ ಬರುತ್ತೇವೆ. ಕೆಲಸ ಮುಗಿಸಿ ಕೆಲವೊಮ್ಮೆ ತಡವಾಗಿ ಬಂದರೆ ಊಟ ಸಿಗುವುದಿಲ್ಲ. ಬಡ ಕಾರ್ಮಿಕರನ್ನು ಗಮನದಲ್ಲಿಟ್ಟುಕೊಂಡು ಹೆಚ್ಚಿನ ಪ್ರಮಾಣದಲ್ಲಿ ಊಟ-ಉಪಹಾರ ನೀಡಬೇಕು'' ಎಂದು ಹೇಳಿದರು.

500 ಪ್ಲೇಟ್‌ಗೆ ಹೆಚ್ಚಿಸಿ

ಕರ್ನಾಟಕ ರಕ್ಷಣಾ ವೇದಿಕೆ ಯರಗಟ್ಟಿ ತಾಲೂಕು ಅಧ್ಯಕ್ಷ ರಫಿಕ್ ಡಿ.ಕೆ. ಅವರು ಈ ದಿನ.ಕಾಮ್ ಜತೆ ಮಾತನಾಡಿ, ''ಇಂದಿರಾ ಕ್ಯಾಂಟಿನ್ ಯೋಜನೆಯಿಂದ ಬಡವರು ಮತ್ತು ಸಾರ್ವಜನಿಕರಿಗೆ ಅನುಕೂಲವಾಗಿದೆ. ಆದರೆ ಯರಗಟ್ಟಿ ತಾಲೂಕು ಕೇಂದ್ರವಾಗಿರುವುದರಿಂದ ಪ್ರತಿದಿನ ಹೆಚ್ಚಿನ ಸಂಖ್ಯೆಯಲ್ಲಿ ಜನರು ಬರುತ್ತಾರೆ. 200 ಪ್ಲೇಟ್ ಯಾವುದಕ್ಕೂ ಸಾಕಾಗುವುದಿಲ್ಲ. ಕನಿಷ್ಠ 500 ಪ್ಲೇಟ್‌ಗಳಿಗೆ ಪ್ರಮಾಣ ಹೆಚ್ಚಿಸಬೇಕು'' ಎಂದು ಒತ್ತಾಯಿಸಿದರು.

ಮಹಾನಾಯಕ ಅಂಬೇಡ್ಕರ್ ಕಟ್ಟಡ ಮತ್ತು ಕೂಲಿ ಕಾರ್ಮಿಕ ಸಂಘಟನೆಯ ಬಾಬು ಚೆನ್ನಮೆತ್ರಿ ಅವರು ಈದಿನ.ಕಾಮ್ ಜತೆ ಮಾತನಾಡಿ, ''ಬಡವರು, ಕಾರ್ಮಿಕರು ಮಾತ್ರವಲ್ಲದೆ ಬಸ್ ನಿಲ್ದಾಣಕ್ಕೆ ಬರುವ ಪ್ರಯಾಣಿಕರೂ ಕ್ಯಾಂಟಿನ್ ಬಳಸುತ್ತಿದ್ದಾರೆ. ತಾಲೂಕು ಕೇಂದ್ರಕ್ಕೆ 200 ಪ್ಲೇಟ್ ಊಟ-ಉಪಹಾರ ಸಾಕಾಗುವುದಿಲ್ಲ. ಸರ್ಕಾರ ಕೂಡಲೇ ಪ್ರಮಾಣ ಹೆಚ್ಚಿಸಬೇಕು'' ಎಂದು ಆಗ್ರಹಿಸಿದರು.

ಇಂದಿರಾ ಕ್ಯಾಂಟಿನ್ ಸಿಬ್ಬಂದಿಯನ್ನು ವಿಚಾರಿಸಿದಾಗ, ಬೆಳಗಿನ ಉಪಹಾರ, ಮಧ್ಯಾಹ್ನದ ಊಟ ಹಾಗೂ ರಾತ್ರಿ ಊಟಕ್ಕೆ ತಲಾ 200 ಪ್ಲೇಟ್‌ಗಳ ಮಿತಿ ಇದೆ. ಆದರೆ ಹೆಚ್ಚಿನ ಸಂಖ್ಯೆಯಲ್ಲಿ ಜನರು ಆಗಮಿಸುವುದರಿಂದ ಸಾಧ್ಯವಾದಷ್ಟು ಹೆಚ್ಚುವರಿ ಜನರಿಗೂ ಊಟ-ಉಪಹಾರ ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಇಂದಿರಾ ಕ್ಯಾಂಟಿನ್ ಬಡವರ ಪಾಲಿಗೆ ಸರ್ಕಾರದ ಮಹತ್ವದ ಯೋಜನೆಯಾಗಿದ್ದು, ಯರಗಟ್ಟಿಯಲ್ಲಿ ಜನರಿಂದ ಉತ್ತಮ ಪ್ರತಿಕ್ರಿಯೆ ದೊರೆಯುತ್ತಿದೆ. ಆದರೆ ಯೋಜನೆಯ ಉದ್ದೇಶ ಬಡವರಿಗೆ ಕಡಿಮೆ ದರದಲ್ಲಿ ಆಹಾರ ಒದಗಿಸುವುದಾದರೆ, ಬೇಡಿಕೆ ಇರುವ ಕಡೆ ಆಹಾರದ ಪ್ರಮಾಣವೂ ಹೆಚ್ಚಾಗಬೇಕು ಎಂಬುದು ಸಾರ್ವಜನಿಕರ ಒತ್ತಾಯ.

ಹೀಗಾಗಿ ಯರಗಟ್ಟಿ ಇಂದಿರಾ ಕ್ಯಾಂಟಿನ್‌ನ ಊಟ-ಉಪಹಾರದ ಪ್ಲೇಟ್‌ಗಳ ಸಂಖ್ಯೆಯನ್ನು 200ರಿಂದ 500ಕ್ಕೆ ಹೆಚ್ಚಿಸಿ, ಆಹಾರಕ್ಕಾಗಿ ಬರುವ ಬಡವರು, ಕಾರ್ಮಿಕರು, ವಿದ್ಯಾರ್ಥಿಗಳು ಹಾಗೂ ಪ್ರಯಾಣಿಕರು ಖಾಲಿ ಕೈಯಲ್ಲಿ ಹಿಂದಿರುಗದಂತೆ ಕ್ರಮ ಕೈಗೊಳ್ಳಬೇಕು ಎಂಬ ಆಗ್ರಹ ಇದೀಗ ಬಲವಾಗಿ ಕೇಳಿಬರುತ್ತಿದೆ.

ಇಂದಿರಾ ಕ್ಯಾಂಟಿನ್ ಬಡವರು, ಕೂಲಿ ಕಾರ್ಮಿಕರು, ವಿದ್ಯಾರ್ಥಿಗಳು ಹಾಗೂ ಪ್ರಯಾಣಿಕರಿಗೆ ಕಡಿಮೆ ದರದಲ್ಲಿ ಆಹಾರ ಒದಗಿಸುವ ಮಹತ್ವದ ಯೋಜನೆಯಾಗಿದೆ. ಆದರೆ ಯರಗಟ್ಟಿಯಲ್ಲಿ ಜನರ ಬೇಡಿಕೆಗೆ ತಕ್ಕಷ್ಟು ಊಟ-ಉಪಹಾರ ಸಿಗದಿರುವುದು ಸಮಸ್ಯೆಯಾಗಿದೆ. ಹೀಗಾಗಿ ಶಾಸಕರು ಹಾಗೂ ಪಟ್ಟಣ ಪಂಚಾಯಿತಿ ಅಧಿಕಾರಿಗಳು ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, 200 ಪ್ಲೇಟ್‌ಗಳ ಮಿತಿಯನ್ನು 500ಕ್ಕೆ ಹೆಚ್ಚಿಸುವಂತೆ ಸಂಬಂಧಪಟ್ಟ ಇಲಾಖೆಗೆ ಸೂಚಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು. ಜನರ ಬೇಡಿಕೆಗೆ ಸ್ಪಂದಿಸಿ ಇಂದಿರಾ ಕ್ಯಾಂಟಿನ್‌ನ ಸೌಲಭ್ಯ ಎಲ್ಲರಿಗೂ ಸಮರ್ಪಕವಾಗಿ ದೊರೆಯುವಂತೆ ಮಾಡಬೇಕಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR